ಸಂಪುಟ : 10 ಸಂಚಿಕೆ: 103 ಪುಟ : 4+2 ಬೆಲೆ: 3.00 ಶನಿವಾರ ಮೇ 24 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 103 Pages : 4+2 Price : 3.00 Saturday May 24 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ತಕರಾರು ಸಲ್ಲಿಸಲು ಜೂ. 9 ಕೊನೆಯ ದಿನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವಲಯದ ಅಧೀನದಲ್ಲಿ ಬರುವ ರಸ್ತೆ ಬದಿ ವಿವಿಧ ಜಾತಿಯ 09 ಆತಂಕಕಾರಿ ಮರಗಳ ಕಟಾವಣೆ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗದಗರವರ ಕಚೇರಿ (ಬಿಂಕದಕಟ್ಟಿ)ಯಲ್ಲಿ ಜೂನ್ 10 ರಂದು ಮಧ್ಯಾಹ್ನ 3:00 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು. ಈ ಬಗ್ಗೆ ತಕರಾರು ಸಲ್ಲಿಸಬಯಸುವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗದಗ ಉಪ ವಿಭಾಗ ಗದಗ ಹಾಗೂ ಮರ ಅಧಿಕಾರಿಯವರಿಗೆ ಬಿಂಕದಕಟ್ಟಿ ಕಚೇರಿಯಲ್ಲಿ ಲಿಖಿತ ರೂಪದಲ್ಲಿ ಕಚೇರಿ ವೇಳೆಯಲ್ಲಿ ಜೂನ್ 9 ರೊಳಗೆ ಸಲ್ಲಿಸಬಹುದಾಗಿದೆ. ಹಾಗೂ ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ:08372-200289 ಸಂಪರ್ಕಿಸಬಹುದಾಗಿದೆ. ಒಂದು ವೇಳೆ ನಿಗದಿತ ದಿನಾಂಕದೊಳಗೆ ತಕರಾರು ಸಲ್ಲಿಸದಿದ್ದರೆ ನಂತರ ಬಂದ ತಕರಾರುಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಗದಗ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ವಲಯದ ಲಕ್ಷ್ಮೇಶ್ವರ ಪುರಸಭೆ ವ್ಯಾಪ್ತಿಯಲ್ಲಿ ಶಿಗ್ಲಿ ನಾಕಾ ಹತ್ತಿರವಿರುವ 1 ಹುಣಸೆ ಮರದ ಕಟಾವಣೆ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗದಗ ರವರ ಕಚೇರಿ ( ಬಿಂಕದಕಟ್ಟಿ) ಯಲ್ಲಿ ಮೇ 28 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು.

ಈ ಬಗ್ಗೆ ತಕರಾರು ಸಲ್ಲಿಸಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾದಿಕಾರಿ ಗದಗ ಉಪವಿಭಾಗ ಗದಗ ಹಾಗೂ ಮರ ಅಧಿಕಾರಿಯವರಿಗೆ ಬಿಂಕದಕಟ್ಟಿ ಕಚೇರಿಯಲ್ಲಿ ಲಿಖಿತ ರೂಪದಲ್ಲಿ ಮೇ 26 ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 08372-200289 ಸಂಪರ್ಕಿಸಬಹುದಾಗಿದೆ. ಒಂದು ವೇಳೆ ನಿಗದಿತ ದಿನಾಂಕದೊಳಗೆ ತಕರಾರು ಸಲ್ಲಿಸದಿದ್ದರೆ ನಂತರ ಬಂದ ತಕರಾರುಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಗದಗ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದರಪಟ್ಟಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯತಿ ಮುಖ್ಯ ಲೆಕ್ಕಾಧಿಕಾರಿಗಳ ಶಾಖೆಗೆ ಹೊಸ ಬ್ಯಾಟರಿಯನ್ನು ಪೂರೈಸಲು ಅಧಿಕೃತ ನೋಂದಾಯಿತ ಮಾರಾಟಗಾರರಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ದರಪಟ್ಟಿ ಸಲ್ಲಿಸಲು ಮೇ 30 ಕೊನೆಯ ದಿನವಾಗಿದೆ. https://zpgadag.karnataka.gov.in ಮತ್ತು https://gadag.nic.in ವೆಬ್ ಸೈಟ್ ವೀಕ್ಷಬಹುದಾಗಿದೆ. ದರಪಟ್ಟಿ ಸಲ್ಲಿಸಲು ತಾಂತ್ರಿಕ ಸಮಸ್ಯೆ ಉಂಟಾದಲ್ಲಿ ಕಚೇರಿ ಅವಧಿಯಲ್ಲಿ ಸಹಾಯಕ ಜಿಲ್ಲಾ ಯೋಜನಾ ವ್ಯವಸ್ಥಾಪಕರು, ಜಿಲ್ಲಾ ಪಂಚಾಯತ್ , ಗದಗ ದೂರವಾಣಿ ಸಂಖ್ಯೆ 6369109865 ಇಲ್ಲಿ ಸಂಪರ್ಕಿಸಬಹುದಾಗಿದೆ.

### ಸಂಕನೂರ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ನೂತನ ಕಟ್ಟಡ ಉದ್ಘಾಟಿಸಿದ ಸಚಿವ ಡಾ. ಶರಣಪ್ರಕಾಶ ಪಾಟೀಲ ಅಭಿಮತ

# ನರ್ಸಿಂಗ್ ಶಿಕ್ಷಣಕ್ಕೆ ಹೆಚ್ಚಿನ ಬೇಡಿಕೆಯಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ನರ್ಸಿಂಗ್ ಶಿಕ್ಷಣಕ್ಕೆ ಇಂದು ಹೆಚ್ಚಿನ ಬೇಡಿಕೆ ಇದೆ. ವೈದ್ಯಕೀಯ ಶಿಕ್ಷಣದಲ್ಲಿ ಕರ್ನಾಟಕ ರಾಜ್ಯವು ಮುಂಚೂಣಿಯಲ್ಲಿದೆ. ದೇಶದಲ್ಲಿಯೇ ತಮಿಳನಾಡು 73 ಮೆಡಿಕಲ್ ಕಾಲೇಜುಗಳನ್ನು ಹೊಂದಿ ಮೊದಲ ಸ್ಥಾನದಲ್ಲಿದ್ದರೆ, ಕರ್ನಾಟಕ ರಾಜ್ಯವು 71 ಕಾಲೇಜುಗಳೊಂದಿಗೆ 2ನೇ ಸ್ಥಾನದಲ್ಲಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ಹೇಳಿದರು.

ಶುಕ್ರವಾರ ಗದುಗಿನ ಭರತ್ ಮೆಗಾ ಸಿಟಿಯಲ್ಲಿ ಸಂಕನೂರ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್‌ನ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಮೆಡಿಕಲ್ ಸೀಟುಗಳನ್ನು ಗಣನೆಗೆ ತೆಗೆದುಕೊಂಡರೆ ದೇಶದಲ್ಲಿಯೇ ಮೊದಲ ಸ್ಥಾನದಲ್ಲಿದ್ದು, ಆರೋಗ್ಯ ಮತ್ತು ತಾಂತ್ರಿಕ ಶಿಕ್ಷಣ ಕ್ಷೇತ್ರಕ್ಕೆ ರಾಜ್ಯವು ಭದ್ರ ಬುನಾದಿ ಹಾಕಿದೆ. ವೀರಪ್ಪ ಮೊಯ್ಲಿ ಅವರ ಅವಧಿಯಲ್ಲಿ ಈ ಶಿಕ್ಷಣಕ್ಕೆ ಪಾರದರ್ಶಕತೆ ತಂದರು. ಮೆರಿಟ್ ಮೇಲೆ ಸೀಟುಗಳನ್ನು ಪಡೆಯಲು ಸಿಇಟಿ, ನೀಟ್ ಪದ್ಧತಿಯನ್ನು ಜಾರಿಗೊಳಿಸಿ ದೇಶಕ್ಕೆ ಮಾದರಿ ಹಾಕಿಕೊಟ್ಟರು ಎಂದರು.



> ನರ್ಸಿಂಗ್ ಕೋರ್ಸ್‌ಗಳಿಗೆ ಇಂದು ಬಹು ಬೇಡಿಕೆ ಇದ್ದು, ನರ್ಸಿಂಗ್ ವಿದ್ಯಾರ್ಥಿಗಳು ವಿದೇಶಿ ಭಾಷೆಗಳ ಜ್ಞಾನವನ್ನು ಹೊಂದಿದ್ದರೆ ವಿದೇಶಗಳಲ್ಲಿಯೂ ಈ ಕೋರ್ಸ್ ಪೂರ್ಣಗೊಳಿಸಬಹುದು. ಅಂಥವರಿಗೆ ಹೆಚ್ಚಿನ ಆದ್ಯತೆ ಇದೆ. ಭಾರತೀಯ ವೈದ್ಯಕೀಯ ಶಿಕ್ಷಣ ಪಡೆದವರಿಗೆ ವಿದೇಶದಲ್ಲಿ ಉತ್ತಮ ಬೇಡಿಕೆ ಇದೆ. ಆದ್ದರಿಂದ ವಿದ್ಯಾರ್ಥಿಗಳು ನರ್ಸಿಂಗ್ ಶಿಕ್ಷಣವನ್ನು ಶೃದ್ಧೆಯಿಂದ ಅಧ್ಯಯನ ಮಾಡಬೇಕು.
>
> – ಡಾ. ಶರಣಪ್ರಕಾಶ ಪಾಟೀಲ.
> ವೈದ್ಯಕೀಯ ಶಿಕ್ಷಣ ಸಚಿವರು.

ಗದಗ ಜಿಲ್ಲೆಗೆ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಸ್ಥಾಪನೆಗೆ ಮುಂದಿನ ಬಜೆಟ್‌ನಲ್ಲಿ ಮುಖ್ಯಮಂತ್ರಿಗಳ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲಾಗುವದು ಎಂದು ಸಚಿವರು ತಿಳಿಸಿದರು.

ವಿ.ಪ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಗದಗ ಪರಿಸರಕ್ಕೆ ಸಂಕನೂರ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ನೂತನ ಕಟ್ಟಡ ಮಾದರಿಯಾಗಿದ್ದು, ಇಲ್ಲಿ ವಿದ್ಯಾರ್ಥಿಗಳು ಶೃದ್ಧೆಯಿಂದ ವ್ಯಾಸಂಗ ಮಾಡುವ ಮೂಲಕ ತಮ್ಮ ಭವ್ಯ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದರು.

> ಸಂಕನೂರ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜ್ ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಮಾನ್ಯತೆ ಪಡೆಯುವ ಮೂಲಕ ಮಾದರಿ ಕಾಲೇಜ್ ಆಗಿ ಮುನ್ನಡೆದಿದ್ದು, ಸಕಲ ಮೂಲಭೂತ ಸೌಲಭ್ಯಗಳೊಂದಿಗೆ ಮುಂಚೂಣಿಯಲ್ಲಿದೆ. ದೂರದೃಷ್ಟಿಯುಳ್ಳ ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಡಾ. ಪ್ರಕಾಶ ಸಂಕನೂರ ಗದಗ ಪರಿಸರಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದ ಜಗದೀಶ ಶೆಟ್ಟರ ಮಾತನಾಡಿ, ನರ್ಸಿಂಗ್ ಕೋರ್ಸ್‌ನ್ನು ವೃತ್ತಿಪರತೆಯೊಂದಿಗೆ ಗುಣಮಟ್ಟದ ಶಿಕ್ಷಣ ನೀಡಲು ಮುಂದಾಗಿರುವ ಸಂಕನೂರ ಕಾಲೇಜು ಮಾದರಿ ಕಾಲೇಜಾಗಲಿ ಎಂದು ಶುಭ ಕೋರಿದರು.

ಮಾಜಿ ಸಚಿವ, ಹಾಲಿ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಇಚ್ಛಾಶಕ್ತಿ, ಧೈರ್ಯದೊಂದಿಗೆ ಡಾ. ಪ್ರಕಾಶ ಸಂಕನೂರ ಅವರು ಪ್ರಾರಂಭಿಸಿದ ಈ ಕಾಲೇಜು ಸುಸಜ್ಜಿತ ಕಟ್ಟಡದೊಂದಿಗೆ ಆರಂಭಗೊಂಡಿದೆ. ವೈದ್ಯರು ಎಷ್ಟು ಮುಖ್ಯವೋ ನರ್ಸ್‌ಗಳೂ ಅಷ್ಟೇ ಮುಖ್ಯ ಎಂದರು.

ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ನರ್ಸಿಂಗ್ ಹಾಗೂ ವೈದ್ಯಕೀಯ ಕಾಲೇಜುಗಳನ್ನು ಮುನ್ನಡೆಸುವದು ಕಷ್ಟದ ಕೆಲಸ. ಅಂತಹ ಕಾರ್ಯಕ್ಕೆ ಮುಂದಾಗಿರುವ ಸಂಕನೂರ ಕುಟುಂಬದ ಸಾಹಸ ▶▶3ನೇ ಪುಟಕ್ಕೆ

### ಅಪ್ರೆಂಟಿಸ್ ತರಬೇತಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ನೇಮಕಾತಿ ಆದೇಶವನ್ನು ವಿತರಿಸಿದ ಸಚಿವ ಡಾ. ಶರಣ ಪ್ರಕಾಶ ಪಾಟೀಲ್

# ಕಲಿಕೆಯ ಸಮಯದಲ್ಲಿ ಶ್ರದ್ಧೆಯಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ವೇಗವಾಗಿ ಸಾಗುವ ಕಾಲಕ್ಕೆ ತಕ್ಕಂತೆ ವಿದ್ಯಾರ್ಥಿಗಳು ತಮ್ಮ ಕೌಶಲ್ಯವನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು ಎಂದು ಕರ್ನಾಟಕ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಶುಕ್ರವಾರ ಅಪ್ರೆಂಟಿಸ್ ತರಬೇತಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ನೇಮಕಾತಿ ಆದೇಶವನ್ನು ವಿತರಿಸಿ ಅವರು ಮಾತನಾಡಿದರು.

ಉತ್ತರ ಕರ್ನಾಟಕದ ವಿದ್ಯಾರ್ಥಿಗಳು ಉದ್ಯೋಗಕ್ಕಾಗಿ ಬೇರೆ ಸ್ಥಳಗಳಿಗೆ ಹೋದಾಗ ಊಟ ಸರಿಯಿಲ್ಲವೆಂದೋ, ತಂದೆ-ತಾಯಿಯವರನ್ನು ಬಿಟ್ಟು ಇರಬೇಕೆಂಬ ನೆಪ ಒಡ್ಡಿ ಸಿಕ್ಕ ಅವಕಾಶವನ್ನು ತೊರೆದ ಹಲವು ಪ್ರಸಂಗಗಳಿವೆ. ಹಾಗಾಗಿ ವಿದ್ಯಾರ್ಥಿಗಳು ಕೆಲಸ ಸಿಕ್ಕ ಮೊದಲ ದಿನಗಳಲ್ಲಿ ಎದುರಾಗುವ ಕಷ್ಟಗಳನ್ನು ಸಹಿಸಿಕೊಳ್ಳಬೇಕು. ಅಂದಾಗ ಅಭ್ಯರ್ಥಿಗಳಿಗೆ ಕಂಪನಿಗಳಿಂದ ಉತ್ತಮ ಅವಕಾಶಗಳು ಒದಗಿಬರುತ್ತವೆ ಎಂದರು.

ಕಂಪನಿಗಳಲ್ಲಿ ಉದ್ಯೋಗಕ್ಕಾಗಿ ಸೇರಿದಾಗ ಉತ್ಪಾದನೆ ಮತ್ತು ಕಂಪನಿಯಲ್ಲಿ ಕಾರ್ಯನಿರ್ವಹಿಸಬೇಕಾದ ಕೌಶಲ್ಯಗಳ ಅಭಿವೃದ್ಧಿ ಜೊತೆಗೆ ಒಟ್ಟಾರೆ ಕಂಪನಿ ಯಾವ ರೀತಿ ನಿರ್ವಹಣೆಗೊಳ್ಳುತ್ತದೆ ಎಂಬುದರ ಬಗ್ಗೆ ವಿಶೇಷ ಆಸಕ್ತಿ ವಹಿಸಬೇಕು. ಕಲಿತ ಕೌಶಲ್ಯವನ್ನು ಕಾಲಕ್ಕೆ ತಕ್ಕಂತೆ ಅಭಿವೃದ್ಧಿಪಡಿಸಿಕೊಳ್ಳಬೇಕು ಮತ್ತು ಉತ್ತಮ ಸಂಭಾಷಣಾ ಕೌಶಲ್ಯವನ್ನು ಹೊಂದಬೇಕು ಎಂದು ನುಡಿದರು.




ಸರ್ಕಾರಿ ಐಟಿಐ ಕಾಲೇಜಿನಲ್ಲಿ ಕಲಿತ 2000 ವಿದ್ಯಾರ್ಥಿಗಳಿಗೆ ತರಬೇತಿ ನೀಡಿ ದೊಡ್ಡ ಖಾಸಗಿ ಸಂಸ್ಥೆಯಲ್ಲಿ 20 ಸಾವಿರ ಸಂಬಳವನ್ನು ಕೊಡುತ್ತಾರೆ. ಕಲಿಯುವ ವಯಸ್ಸಿನಲ್ಲಿ ಯುವಕರು ಕಷ್ಟಪಟ್ಟು, ಶ್ರದ್ಧೆಯಿಂದ ಕಲಿಯಬೇಕು. ತಮ್ಮ ಜೀವನವನ್ನು ಉತ್ತಮ ರೀತಿಯಲ್ಲಿ ರೂಪಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

> ಗದಗ ತಾಲೂಕಾ ಗ್ಯಾರಂಟಿ ಸಮಿತಿ ಸದಸ್ಯ ಕೃಷ್ಣಗೌಡ ಪಾಟೀಲ ಮಾತನಾಡಿ, ಅಪ್ರೆಂಟಿಸ್ ಪ್ರಕ್ರಿಯೆಯಲ್ಲಿ 290ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ 170 ಜನ ಆಯ್ಕೆಯಾಗಿರುವುದು ಸಂತೋಷ ತಂದಿದೆ. ಯುವಕರು ತಮಗೆ ಆಸಕ್ತಿಯಿರುವ ಯಾವುದೇ ಕೌಶಲ್ಯ ಅಭಿವೃದ್ಧಿಯ ಪ್ರಕ್ರಿಯೆಯನ್ನು ನಿರಂತರವಾಗಿ ಮಾಡುತ್ತಿರಬೇಕು. ಕೆಲಸದ ಪ್ರಾರಂಭದಲ್ಲಿ ಕಡಿಮೆ ಸಂಬಳ ಸಿಗುವ ಕಾರಣವೊಡ್ಡಿ ಕಲಿಕೆಯನ್ನು ಬಿಡಬಾರದು. ಇಂದಿನ ದಿನಮಾನದಲ್ಲಿ ತಂತ್ರಜ್ಞಾನ ಅತ್ಯಂತ ವೇಗವಾಗಿ ಬೆಳೆಯುತ್ತಿದೆ. ನವ ಯುಗಕ್ಕೆ ತಕ್ಕಂತೆ ನಮ್ಮ ಕೌಶಲ್ಯವನ್ನು ಬೆಳೆಸಿಕೊಳ್ಳಬೇಕು ಎಂದರು.

ಕೆ.ಎಚ್. ಪಾಟೀಲ ಸರ್ಕಾರಿ ಐಟಿಐ ಕಾಲೇಜಿನ ಪ್ರಾಚಾರ್ಯ ಬಸವರಾಜ ಮಲ್ಲೂರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೌಶಲ್ಯಾಭಿವೃದ್ಧಿ ಇಲಾಖೆ ಜಂಟಿ ನಿರ್ದೇಶಕ ಬಸವಪ್ರಭು ಹಿರೇಮಠ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಕಾಲೇಜಿನ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಜರಿದ್ದರು.

### ಸಚಿವ ಎಚ್.ಕೆ. ಪಾಟೀಲರಿಂದ ಪ್ರವಾಸಿ ಟ್ಯಾಕ್ಸಿ ವಿತರಣೆ

# ಸರ್ಕಾರಿ ಸೌಲಭ್ಯಗಳ ಸದುಪಯೋಗವಾಗಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಿರುದ್ಯೋಗಿಗಳು ಸ್ವಯಂ ಉದ್ಯೋಗ ನಡೆಸಿ ಸ್ವಾವಲಂಬಿಗಳಾಗಲು ಪ್ರವಾಸಿ ಟ್ಯಾಕ್ಸಿ ಸಹಕಾರಿಯಾಗಲಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಕಾಟನ್ ಸೇಲ್ ಸೊಸೈಟಿಯಲ್ಲಿ ಶುಕ್ರವಾರ ಪ್ರವಾಸೋದ್ಯಮ ಇಲಾಖೆಯ ಪ್ರವಾಸಿ ಟ್ಯಾಕ್ಸಿ ಯೋಜನೆಯಡಿ 50 ಟ್ಯಾಕ್ಸಿಗಳನ್ನು ಫಲಾನುಭವಿಗಳಿಗೆ ವಿತರಿಸಿ ಅವರು ಮಾತನಾಡಿದರು.

ಸರ್ಕಾರದಿಂದ ಪ್ರತಿ ಟ್ಯಾಕ್ಸಿಗೆ 5 ಲಕ್ಷ ರೂ (ಸಬ್ಸಿಡಿ) ಸಹಾಯಧನ ಸೌಲಭ್ಯವಿದ್ದು, ಫಲಾನುಭವಿಗಳು ಈ ಯೋಜನೆಯ ಸದುಪಯೋಗಪಡಿಸಿಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಖನಿಜ ಅಬಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ್ವರ ವಿಭೂತಿ, ಡಿ.ಆರ್. ಪಾಟೀಲ ಸೇರಿದಂತೆ ಗಣ್ಯರು, ಪ್ರಮುಖರು ಹಾಜರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್

# 120 ಸರ್ಕಾರಿ ಐಟಿಐ ಕಾಲೇಜುಗಳು ಮೇಲ್ದರ್ಜೆಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿರುವ ಯುವಜನತೆಗೆ ಕೌಶಲ್ಯಾಭಿವೃದ್ಧಿ ಸಂಬಂಧಿತ ತರಬೇತಿ ನೀಡಿ ಅವರಿಗೆ ಉದ್ಯೋಗ ಒದಗಿಸುವುದೇ ರಾಜ್ಯ ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದು ಕರ್ನಾಟಕ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಒಟ್ಟು 120 ಸರ್ಕಾರಿ ಐಟಿಐ ಕಾಲೇಜಿನಲ್ಲಿರುವ ಉಪಕರಣಗಳು ಸೇರಿದಂತೆ ಕಟ್ಟಡಗಳನ್ನು ನಿರ್ಮಿಸಿ ಮೇಲ್ದರ್ಜೆ ಗೇರಿಸಲಾಸಲಾಗುವುದು.

1400 ಕೋಟಿ ರೂ ಪ್ರಸ್ತಾವನೆಯನ್ನು ಹಣಕಾಸು ಇಲಾಖೆಗೆ ಕಳುಹಿಸಲಾಗಿದೆ. ಕೆ-ಜಿಡಿಟಿಐ ಅಭಿವೃದ್ಧಿಗಾಗಿ 1500 ಕೋಟಿ ರೂ ಪ್ರಸ್ತಾವನೆ ಕಳುಹಿಸಲಾಗಿದೆ. ವಿಶೇಷವಾಗಿ, ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದ ನೀಡುವ ಯುವನಿಧಿ ಗ್ಯಾರಂಟಿಯಲ್ಲಿ 2,87,000 ಪದವಿ/ಡಿಪ್ಲೋಮಾ ಮಾಡಿದವರು ನೊಂದಣಿಯಾಗಿದ್ದಾರೆ. 1,90,000 ಜನರಿಗೆ ಯುವನಿಧಿ ಗ್ಯಾರಂಟಿ ಯೋಜನೆಯಡಿ ತಿಂಗಳಿಗೆ 3 ಸಾವಿರ ರೂಗಳಂತೆ ನೀಡಲಾಗುತ್ತಿದೆ. ಅಲ್ಲದೆ, ನೋಂದಣಿಯಾದವರಿಗೆ ಹೆಚ್ಚುವರಿ ಉದ್ಯೋಗ ಕೌಶಲ್ಯವನ್ನು ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.



> ಯಾವುದೇ ಕಂಪನಿಗಳು ಮುಂದೆ ಬಂದು ತಮಗೆ ಬೇಕಾದ ಅಭ್ಯರ್ಥಿಗಳ ಸಂಖ್ಯೆ ಮತ್ತು ಅವರಿಗೆ ಇರಬೇಕಾದ ಕೌಶಲ್ಯವನ್ನು ತಿಳಿಸಿದರೆ, ಉದ್ಯೋಗವನ್ನು ಅರಿಸಿ ಬರುವವರಿಗೆ ತಗಲುವ ತರಬೇತಿ ವೆಚ್ಚವನ್ನು ಸರ್ಕಾರವೇ ನೀಡುತ್ತದೆಯಲ್ಲದೆ, ಇಂಡಸ್ಟ್ರಿಯಲ್ ಲಿಂಕೇಜ್ ಮಾಡಲಾಗುತ್ತದೆ.
>
> – ಡಾ. ಶರಣಪ್ರಕಾಶ್ ಪಾಟೀಲ್.
> ವೈದ್ಯಕೀಯ, ಕೌಶಲ್ಯ ಅಭಿವೃದ್ಧಿ ಸಚಿವರು.

ಕೌಶಲ್ಯ ಅಭಿವೃದ್ಧಿ ಇಲಾಖೆಯಡಿ ಬರುವ ಐಟಿಐ ಕಾಲೇಜುಗಳು ಕೆಜಿಡಿಟಿಐ, ಸರ್ಕಾರಿ ಟೂಲ್ ಆ್ಯಂಡ್ ಟ್ರೇಡಿಂಗ್ ಸೆಂಟರ್‌ಗಳು 33 ಇವೆ. ಈ ವರ್ಷ ಇನ್ನೂ 8 ಸೆಂಟರ್‌ಗಳನ್ನು ಸೇರಿಸಿ ಮೇಲ್ದರ್ಜೆಗೆ ಏರಿಸಲಾಸಲಾಗುತ್ತಿದೆ. ಅದರ ಜೊತೆಗೆ ಹೆಚ್ಚುವರಿ ಕೋರ್ಸ್‌ಗಳನ್ನು ನೀಡಲಾಗುತ್ತದೆ.

ಯುವಕರಿಗೆ ಯಾವ ರೀತಿ ಉದ್ಯೋಗ ಕೊಡಿಸಬಹುದು ಎನ್ನುವುದರ ಕಡೆಗೆ ಸರ್ಕಾರ ಗಮನವಹಿಸಿದೆ. ಹಾಗಾಗಿ ಬೆಳಗಾವಿ, ಕಲಬುರಗಿ, ಗದಗ, ಸೇಡಂ, ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಅನೇಕ ಉದ್ಯೋಗ ಮೇಳಗಳನ್ನು ನಡೆಸಲಾಗಿದೆ ಎಂದರು.

## ಸಂಪಾದಕೀಯ

# ಅತಿಥಿ ಶಿಕ್ಷಕರ ಅನಿವಾರ್ಯತೆ ಮತ್ತು ನೇಮಕಾತಿಯ ಅಗತ್ಯತೆ

ಕರ್ನಾಟಕ ಸರ್ಕಾರವು 2025-26ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಒಟ್ಟು 51,000 ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಅಧಿಸೂಚನೆ ಹೊರಡಿಸಿರುವುದು ಸ್ವಾಗತಾರ್ಹ ಕ್ರಮವಾಗಿದೆ.

ಶೈಕ್ಷಣಿಕ ವರ್ಷದ ಆರಂಭದಿಂದಲೇ ಮಕ್ಕಳ ಕಲಿಕೆಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುವ ಸರ್ಕಾರದ ಈ ನಿರ್ಧಾರವು ಸಕಾರಾತ್ಮಕ ಬೆಳವಣಿಗೆಯಾಗಿದೆ. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಅವರು ವರದಿ ಮಾಡಿದಂತೆ, ಶಾಲಾ ಪ್ರಾರಂಭದ ದಿನವೇ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಯಂ ಶಿಕ್ಷಕರ ನೇಮಕವಾಗುವವರೆಗೆ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಅನಿವಾರ್ಯತೆ ಇದೆ. ಈ ತತಕ್ಷಣದ ಕ್ರಮವು ಖಂಡಿತವಾಗಿಯೂ ಶಿಕ್ಷಕರ ಕೊರತೆಯನ್ನು ನೀಗಿಸಲು ಸಹಾಯ ಮಾಡುತ್ತದೆ. ಆದರೆ, ಈ ನಿರ್ಧಾರವು ಕೇವಲ ತಾತ್ಕಾಲಿಕ ಪರಿಹಾರವಾಗಿದೆ.


ಅತಿಥಿ ಶಿಕ್ಷಕರ ನೇಮಕಾತಿ ಖಾಯಂ ಶಿಕ್ಷಕರ ನೇಮಕವಾಗುವವರೆಗೆ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮಾತ್ರ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಿದೆ. ಅತಿಥಿ ಶಿಕ್ಷಕರಿಂದ ಪೂರ್ಣಾವಧಿ ಶಿಕ್ಷಕರಂತೆ ನಿರಂತರ ಮತ್ತು ದೀರ್ಘಾವಧಿಯ ಸೇವೆಯನ್ನು ನಿರೀಕ್ಷಿಸಲು ಸಾಧ್ಯವಿಲ್ಲ. ಅವರ ಸೇವೆಯ ಅವಧಿ ನಿಗದಿತವಾಗಿರುವುದರಿಂದ, ಶೈಕ್ಷಣಿಕ ಯೋಜನೆಗಳು ಮತ್ತು ವಿದ್ಯಾರ್ಥಿಗಳ ಪ್ರಗತಿಯಲ್ಲಿ ನಿರಂತರತೆಯನ್ನು ಕಾಯ್ದುಕೊಳ್ಳುವುದು ಸವಾಲಾಗಬಹುದು.

ರಾಜ್ಯದ ಶೈಕ್ಷಣಿಕ ವ್ಯವಸ್ಥೆ ನಿಜವಾಗಿಯೂ ಸುಧಾರಿಸಬೇಕಾದರೆ, ಸರ್ಕಾರವು ಶಿಕ್ಷಕರ ಖಾಯಂ ಹುದ್ದೆಗಳನ್ನು ಭರ್ತಿ ಮಾಡಲು ಆದ್ಯತೆ ನೀಡಬೇಕು. ಪ್ರಸ್ತುತ, ಅನೇಕ ಶಿಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ ಶೈಕ್ಷಣಿಕ ಗುಣಮಟ್ಟದ ಮೇಲೆ ಪರಿಣಾಮ ಬೀರುತ್ತಿದೆ. ಪೂರ್ಣಾವಧಿ, ಖಾಯಂ ಶಿಕ್ಷಕರು ಮಾತ್ರ ದೀರ್ಘಾವಧಿಯ ಬದ್ಧತೆ, ವೃತ್ತಿಪರ ಅಭಿವೃದ್ಧಿ ಮತ್ತು ಶಾಲೆಯ ಒಟ್ಟಾರೆ ಶೈಕ್ಷಣಿಕ ಪರಿಸರಕ್ಕೆ ಸ್ಥಿರ ಕೊಡುಗೆ ನೀಡಲು ಸಾಧ್ಯ.

ಹೀಗಾಗಿ, ಅತಿಥಿ ಶಿಕ್ಷಕರ ನೇಮಕಾತಿಯು ತುರ್ತು ಪರಿಸ್ಥಿತಿಯನ್ನು ನಿಭಾಯಿಸಲು ಒಂದು ಪರಿಣಾಮಕಾರಿ ಮಾರ್ಗವಾಗಿದ್ದರೂ, ಶಿಕ್ಷಣ ಇಲಾಖೆಯು ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ತ್ವರಿತ ಮತ್ತು ಸಮಗ್ರ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸುವುದು ಅನಿವಾರ್ಯ. ಇದು ರಾಜ್ಯದ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಲು ಮತ್ತು ಗುಣಮಟ್ಟದ ಶಿಕ್ಷಣವನ್ನು ಖಚಿತಪಡಿಸಿಕೊಳ್ಳಲು ಅತ್ಯಗತ್ಯವಾಗಿದೆ.

## ಅಂತಾರಾಷ್ಟ್ರೀಯ ಮಟ್ಟದಲ್ಲಿ ಕನ್ನಡದ ಕಂಪು ಪಸರಿಸಿದ ಕನ್ನಡತಿ

# ಬಾನು ಮುಷ್ತಾಕ್‌ಗೆ ಒಲಿದ 'ಬೂಕರ್' ಪ್ರಶಸ್ತಿ



ಕನ್ನಡದ ಲೇಖಕಿ ಬಾನು ಮುಷ್ತಾಕ್ ಅವರ 'ಹಸೀನಾ ಮತ್ತು ಇತರೆ ಕಥೆಗಳು' ಕಥಾ ಸಂಕಲನದ ಇಂಗ್ಲೀಷ್ ಭಾಷಾಂತರ 'ಹಾರ್ಟ್ ಲ್ಯಾಂಪರ್' ಕೃತಿಗೆ ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ಲಭಿಸಿದೆ. ಕನ್ನಡದ ಕೃತಿಯೊಂದಕ್ಕೆ ಪ್ರತಿಷ್ಠಿತ ಬೂಕರ್ ಪ್ರಶಸ್ತಿ ಸಿಕ್ಕಿದ್ದು ಇದೇ ಮೊದಲು. ಈ ಪ್ರಶಸ್ತಿಯಿಂದ ಕನ್ನಡದ ಧ್ವಜ ಅಂತಾರಾಷ್ಟ್ರೀಯ ಸಾಹಿತ್ಯ ವಲಯದಲ್ಲಿ ಜನಮನ್ನಣೆ ಪಡೆದಿದ್ದು, ಎರಡು ಸಾವಿರ ವರ್ಷಗಳ ಇತಿಹಾಸ ಹೊಂದಿರುವ ನಮ್ಮ ಭಾಷೆಯು ಜಗತ್ತಿನ ಮೂಲೆ ಮೂಲೆಯನ್ನು ತಲುಪಿದರೆ ಇನ್ನೆಷ್ಟು ಹೆಮ್ಮೆ ಕನ್ನಡಿಗರಿಗೆ!

ಇದು ಕನ್ನಡಕ್ಕೆ ದಕ್ಕಿದ ಮೊಟ್ಟಮೊದಲ ಬೂಕರ್ ಪ್ರಶಸ್ತಿ. ನಮ್ಮ ಕನ್ನಡತಿ ಬಾನು ಮುಷ್ತಾಕ್ ಈ ಪ್ರಶಸ್ತಿ ಪಡೆದ 6ನೇ ಭಾರತೀಯರು. ಬೂಕರ್ ಪ್ರಶಸ್ತಿ ಸ್ವೀಕರಿಸಿ ಮಾತನಾಡಿರುವ ಬಾನು ಮುಷ್ತಾಕ್, ತಮ್ಮ ಗೆಲುವನ್ನು ವೈವಿಧ್ಯತೆಗೆ ದೊರೆತ ಜಯ ಎಂದು ಬಣ್ಣಿಸಿದ್ದಾರೆ. ಯಾವ ಕಥೆಯೂ ಸಣ್ಣದಲ್ಲ, ಅನುಭವದ ವಸ್ತ್ರದಲ್ಲಿನ ಪ್ರತಿ ಎಳೆಯೂ ಇಡೀ ಕಥೆಯ ತೂಕವನ್ನು ಹೊಂದಿರುತ್ತದೆ ಎಂಬ ನಂಬಿಕೆಯಿಂದಲೇ ಈ ಪುಸ್ತಕ ರೂಪುಗೊಂಡಿದೆ ಎಂದು ಹೇಳಿದರು. ಎತ್ತಿನ ಬಂಡಿಗಳಲ್ಲಿ ಶುರುವಾಗಿ ನನ್ನ ಪಯಣ ವಿಮಾನ ಏರಿ ಬೂಕರ್‌ನಂತಹ ಈ ಜಾಗತಿಕ ವೇದಿಕೆಯವರೆಗೆ ತಂದು ನಿಲ್ಲಿಸಿರುವುದನ್ನು ನೋಡಿದರೆ ಮನಸ್ಸು ತುಂಬಿ ಬರುತ್ತದೆ ಎಂದು ಅನುವಾದಕಿ ಭಸ್ತಿ ಹರ್ಷ ವ್ಯಕ್ತಪಡಿಸಿದ್ದಾರೆ. ಬೂಕರ್ ಪ್ರಶಸ್ತಿ ಇದೇ ಮೊದಲ ಬಾರಿಗೆ ಕನ್ನಡದ ಕೃತಿಗೆ ಸಿಕ್ಕಿರುವುದು ವಿಶೇಷ. ಬೂಕರ್ ಪ್ರಶಸ್ತಿ 50 ಸಾವಿರ ಪೌಂಡ್ (ಅಂದಾಜು 57.28 ಲಕ್ಷ ರೂ) ಒಳಗೊಂಡಿದೆ.

ಕುರಾನ್ ಹಾಗೂ ಉರ್ದುವನ್ನೇ ಕಲಿಯಬೇಕು ಎನ್ನುವ ಒಂದು ಸಮಾಜದ ಲಕ್ಷ್ಮಣ ರೇಖೆಯನ್ನು ಮೀರಿ ಇಂಗ್ಲೀಷ್ ಹಾಗೂ ಕನ್ನಡವನ್ನು ಕಲಿತು, ಮದುವೆಯಾಗು, ಮಕ್ಕಳನ್ನು ಹೆರು ಎನ್ನುವ ಒತ್ತಡದ ಸಂಕೋಲೆಯನ್ನು ಕಡಿದು, ಬುರ್ಕಾ ಧರಿಸಿ, ನಾಲ್ಕು ಗೋಡೆಗಳೊಳಗೆ ಬದುಕು ಎನ್ನುವವರ ನಡುವೆ ಹೊರಗಡೆ ಅಂದು ಸಾಹಿತ್ಯ ಲೋಕದಲ್ಲಿ ಹಾರುವ ಛಲವನ್ನು ತಳೆದು, ಬೇಸರದ ಬೇಗೆಯಲ್ಲಿ ಪೆಟ್ರೋಲ್ ಸುರಿದು ತನ್ನನ್ನೇ ತಾನು ಸುಟ್ಟಿಕೊಂಡು ಬೂದಿಯಾಗಬೇಕು ಎಂದಿದ್ದ ಆ ತಾಯಿ ಇಂದು ಅಂತಾರಾಷ್ಟ್ರೀಯ ಮಟ್ಟದಲ್ಲಿ ತನ್ನ ಅಕ್ಷರಗಳ ಮೂಲಕ ತನ್ನಂತಹ ಲಕ್ಷಾಂತರ ಜನರಿಗೆ ಧನಿಯಾಗಿದ್ದಾರಲ್ಲ, ಇದು ಸ್ಫೂರ್ತಿದಾಯಕ ಸಾಧಕಿಯ ಕಥೆ.

ಹಾಸನದಲ್ಲಿ ನೆಲೆಸಿರುವ ಬಾನು ಮುಷ್ತಾಕ್ ಅವರು ಲೇಖಕಿಯಾಗಿ, ಪತ್ರಕರ್ತೆಯಾಗಿ, ನ್ಯಾಯವಾದಿಯಾಗಿ ಕ್ರಿಯಾಶೀಲರಾಗಿದ್ದಾರೆ. ಹಲವು ಕಥಾ ಸಂಕಲನ ಮತ್ತು ಪ್ರಬಂಧಗಳು ಪ್ರಕಟಿಸಿರುವ ಅವರು ಕೌಟುಂಬಿಕ ತಡೆ ಕಾಯ್ದೆಯನ್ನು ಕನ್ನಡದಕ್ಕೆ ಅನುವಾದಿಸಿದ್ದಾರೆ. ಫಾರಸಿ ಕೃತಿ ತಾರೀಖ್-ಎ-ಫ಼ಿರಿಸ್ತಾವನ್ನು ಉರ್ದುವಿನಿಂದ ಕ್ನನಡೀಕರಿಸಿದ್ದಾರೆ. ಕರಿನಾಗರಗಳು ಕತೆಯನ್ನು ಆಧರಿಸಿ ಗಿರೀಶ ಕಾಸರವಳ್ಳಿ ಅವರು ಹಸೀನಾ ಚಿತ್ರ ನಿರ್ದೇಶಿದ್ದರು. ಬಾನು ಅವರ ಅನೇಕ ಕತೆಗಳು ಹಿಂದಿ, ಇಂಗ್ಲೀಷ್ ಉರ್ದು, ಮಲಯಾಳಂ, ತಮಿಳು ಭಾಷೆಗಳಿಗೆ ಅನುವಾದಗೊಂಡಿವೆ.

1954 ಎಪ್ರಿಲ್ 3ರಂದು ಹಾಸನ ಜಿಲ್ಲೆಯ ವಲಭಬಾಯಿಯಲ್ಲಿ ಜನಿಸಿದರು. ಬಿ.ಎಸ್.ಸಿ., ಎಲ್.ಎಲ್.ಬಿ. ಪದವೀಧರೆಯಾಗಿದ್ದು, ಸದ್ಯ ಹಾಸನದಲ್ಲಿ ನ್ಯಾಯವಾದಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರು ಬರೆದ ಬೆಂಕಿಮಳೆ ಕತೆ 'ಹಸೀನಾ' ಹೆಸರಲ್ಲಿ ಚಲನಚಿತ್ರವಾಗಿ 3 ರಾಷ್ಟ್ರಪ್ರಶಸ್ತಿ ಗಳಿಸಿವೆ. ಲಂಕೇಶ ಪತ್ರಿಕೆಗೆ ಜಿಲ್ಲಾ ವರದಿಗಾರರಾಗಿ 9 ವರ್ಷ ಸೇವೆ ಸಲ್ಲಿಸಿದ್ದಾರೆ. ಹೆಜ್ಜೆ ಮೂಡಿದ ಹಾದಿ, ಬೆಂಕಿಮಳೆ, ಎದೆಯ ಹಣತೆ ಕಥಾ ಸಂಕಲನ ಹೊರತಂದಿದ್ದು, ಅವರ ಸಾಹಿತ್ಯ ಸೇವೆಗೆ ಹಲವಾರು ಪ್ರಶಸ್ತಿಗಳು ಲಭಿಸಿವೆ.

ಬಾನು ಮುಷ್ತಾಕ್ ಕೌಟುಂಬಿಕ ದೌರ್ಜನ್ಯ ಕಾಯಿದೆಯಂತಹ ಕೃತಿಯನ್ನು ರಚಿಸಿ ಚಿಂತಕರ ಕನ್ನಡಿಗರ ಮನೆಮಾತಾಗಿದ್ದಾರೆ. ಇವರ ಸಾಹಿತ್ಯ ಕೃಷಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಗೌರವ ಪ್ರಶಸ್ತಿ, ಪದ್ಮಭೂಷಣ ಬಿ.ಸರೋಜಾದೇವಿ ಸಾಹಿತ್ಯ ಪ್ರಶಸ್ತಿ, ಒಮ್ಮೆ ಹೆಣ್ಣಾಗು ಪ್ರಭುವೆ ನಾಟಕ ರೂಪಾಂತರಕ್ಕೆ ಇಂಟರ್‌ನ್ಯಾಷನಲ್ ವುಮನ್ ಫಾರ್ ರೇಡಿಯೋ ಆ್ಯಂಡ್ ಟೆಲಿವಿಷನ್ ಬಹುಮಾನ, ಕರ್ನಾಟಕ ಕಲ್ಪವಲ್ಲಿ ಪ್ರಶಸ್ತಿ, ಕರ್ನಾಟಕ ಲೇಖಕಿಯರ ಸಂಘದ ಎಚ್.ವಿ. ಸಾವಿತ್ರಮ್ಮ ದತ್ತಿನಿಧಿ ಬಹುಮಾನ ಹಾಗೂ ಗುಡಿಬಂಡೆ ಪೂರ್ಣಿಮಾ ದತ್ತಿನಿಧಿ ಬಹುಮಾನ, ಶ್ರವಣಬೆಳಗೊಳ ಮಹಾಮಸ್ತಕಾಭಿಷೇಕ ಪ್ರಶಸ್ತಿ, ಸುಧಾಮೂರ್ತಿ ಪ್ರಶಸ್ತಿಗಳು ಅವರನ್ನರಸಿ ಬಂದಿವೆ.

1990 ಮತ್ತು 2023ರ ನಡುವೆ ಪ್ರಕಟಗೊಂಡ 12 ಕತೆಗಳನ್ನೊಳಗೊಂಡ ಈ ಸಂಕಲನವನ್ನು ದೀಪಾ ಭಸ್ತಿ ಕನ್ನಡದಿಂದ ಇಂಗ್ಲೀಷ್‌ಗೆ ಅನುವಾದಿಸಿದ್ದಾರೆ, ಮುಸ್ಲಿಂ ಸಮುದಾಯದ ಬಾಲಕಿಯರು ಹಾಗೂ ಹೆಣ್ಣುಮಕ್ಕಳ ದೈನಂದಿನ ಬದುಕನ್ನು ಆಧಾರಿಸಿ ಈ ಕಥೆಗಳು ಬರೆಯಲಾಗಿದೆ. 2025ರ ಮೇ 21ರಂದು ಲಂಡನ್‌ನಲ್ಲಿ ಟೇಟ್ ಮಾಡರ್ನ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಧಿಕೃತವಾಗಿ ಪ್ರಶಸ್ತಿಯನ್ನು ಘೋಷಿಸಲಾಯಿತು. ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತರಾಗಿರುವ ಕನ್ನಡದ ಹೆಮ್ಮೆಯ ಲೇಖಕಿ ಬಾನು ಮುಷ್ತಾಕ್ ಅವರಿಗೆ ಇದು ಕನ್ನಡ ಕನ್ನಡಿಗ ಮತ್ತು ಕರ್ನಾಟಕ ಸಂಭ್ರಮಿಸುವ ಸಮಯ.

ಈ ನೆಲದ ಸೌಹಾರ್ದತೆ, ಜಾತ್ಯತೀತತೆ ಮತ್ತು ಸೋದರತ್ವದ ನಿಜ ಮೌಲ್ಯಗಳನ್ನು ಮೈಗೂಡಿಸಿಕೊಂಡು ಬರೆಯುತ್ತಿರುವ ಬಾನು ಮುಷ್ತಾಕ್ ಅವರು ಕನ್ನಡದ ಹಿರಿಮೆಯ ಬಾವುಟವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹಾರಿಸಿ ಇನ್ನಷ್ಟು ಕಾಲ ಸತ್ವಯುತವಾಗಿ ಬರೆಯುತ್ತ ಕನ್ನಡದ ಕಂಪನ್ನು ಜಗದಗಲಕ್ಕೆ ಪಸರಿಸುತ್ತಾ ಇರಲಿ. ಅನುವಾದಕಿ, ಪ್ರತಿಭಾವಂತ ಲೇಖಕಿ ದೀಪಾ ಭಸ್ತಿ ಅವರಿಗೂ ಕನ್ನಡಿಗರೆಲ್ಲರ ಪರವಾಗಿ ಅಭಿನಂದನೆಗಳು.

ಈ ನೆಲದ ನುಡಿಯ ಕಸ್ತೂರಿ ಸುಗಂಧವನ್ನು ಲೇಪಿಸಿದ ಕನ್ನಡಕ್ಕೆ ನಾಡಿನ ಖ್ಯಾತ ಲೇಖಕರು, ಚಿಂತಕರು, ಕವಿಗಳು, ವಿಮರ್ಶಕರು, ಅಭಿಮಾನಿಗಳು, ಗೆಳೆಯರು, ಅಷ್ಟೇ ಅಲ್ಲದೆ ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಸಾಹಿತ್ಯ ಅಕಾಡೆಮಿ, ಸಂಘ-ಸಂಸ್ಥೆಗಳು, ಇಲಾಖೆಗಳು ನಮ್ಮ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತರಾಗಿರುವ ಕನ್ನಡದ ಹೆಮ್ಮೆಯ ಲೇಖಕಿ ಬಾನು ಮುಷ್ತಾಕ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



– ಡಾ. ತಯಬಅಲಿ ಅ.ಹೊಂಬಳ.
ಗದಗ.

# ಕಾಂಗ್ರೆಸ್ ಅಧಿಕಾರ ಹಿಡಿದು ಬಿಜೆಪಿಯ ನೀತಿ ಮುಂದುವರೆಸಿದೆ; ಎದ್ದೇಳು ಕರ್ನಾಟಕ ಆಕ್ರೋಶ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಪಕ್ಷದಲ್ಲಿದ್ದಾಗ ಬಿಜೆಪಿ ತಂದಿದ್ದ ಜಾನುವಾರು ಹತ್ಯೆ ಕಾಯ್ದೆ, ಭೂ ಸುದಾರಣೆ ಕಾಯ್ದೆ, ಕಾರ್ಮಿಕರ ಕೆಲಸದ ಅವಧಿಯನ್ನು 8 ರಿಂದ 12ಕ್ಕೆ ಏರಿಸುವುದರ ವಿರುದ್ಧ ಮಾತಾನಾಡಿದ್ದ ಕಾಂಗ್ರೆಸ್, ಅಧಿಕಾರ ಹಿಡಿದು ಅದನ್ನೇ ಮುಂದುವರಿಸಿದೆ ಎಂದು 'ಎದ್ದೇಳು ಕರ್ನಾಟಕ'ದ ಕೇಂದ್ರ ಸಮಿತಿ ಸದಸ್ಯ, ರೈತ ಮುಖಂಡ ವೀರ ಸಂಗಯ್ಯ ಅವರು ಶುಕ್ರವಾರ ಆಕ್ರೋಶ ವ್ಯಕ್ತಪಡಿಸಿದರು. ಎದ್ದೇಳು ಕರ್ನಾಟಕ ಸಂಘಟನೆಯು ಬೆಂಗಳೂರಿನ ಪ್ರೆಸ್ ಕ್ಲಬ್‌ನಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡುತ್ತಿದ್ದರು. ಕಾಂಗ್ರೆಸ್ ಅಧಿಕಾರ ಹಿಡಿದು

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವೀರ ಸಂಗಯ್ಯ ಅವರು, "ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದು ಎರಡು ವರ್ಷಗಳಾಯಿತು. ಅದಕ್ಕಿಂತಲೂ ಮುಂಚೆ ಬಿಜೆಪಿಯಿಂದ ರೋಸಿ ಹೋಗಿದ್ದ ರೈತ, ದಲಿತ, ಮಹಿಳಾ ಸಂಘಟನೆಗಳು ಸೇರಿದಂತೆ ರಾಜ್ಯದ ಜನರು ಹೋರಾಟ ನಡೆಸಿ ಬಿಜೆಪಿಯನ್ನು ಸೋಲಿಸಿದರು. ಅದಾಗ್ಯೂ ರಾಜ್ಯದಾದ್ಯಂತ 100ಕ್ಕೂ ಹೆಚ್ಚು ಕೋಮುಗಲಭೆ ನಡೆದಿದೆ. ಅದರ ಬಗ್ಗೆ ಅವರು ಸರಿಯಾದ ನಿಲುವು ತೆಗೆದುಕೊಂಡಿಲ್ಲ. ನೀಡಿದ ಭರವಸೆಗಳನ್ನು ಈಡೇರಿಸದಿದ್ದರೆ ಬೀದಿಯಲ್ಲಿ ಚಳವಳಿಗಳ ಮೂಲಕ ಎದುರಿಸಲಿದ್ದೇವೆ" ಎಂದು ಹೇಳಿದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನಲ್ಲಿ ನಡೆಯುತ್ತಿರುವ ಸಮಾಜ ಕಲ್ಯಾಣ ಇಲಾಖೆಯ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಸತಿ ನಿಲಯಗಳಾದ ಬಾಲಕ ವಸತಿ ನಿಲಯ ಶಿರಹಟ್ಟಿ, ಸಾರ್ವಜನಿಕ ಹೆಣ್ಣು ಮಕ್ಕಳ ವಸತಿ ನಿಲಯ ಶಿರಹಟ್ಟಿ, ಸರ್ಕಾರಿ ಬಾಲಕರ ವಸತಿ ನಿಲಯ ಕಡಕೋಳ, ಬನ್ನಿಕೊಪ್ಪ, ಸೂರಣಗಿ, ಬಾಲೆಹೊಸೂರು ಇಲ್ಲಿ ಖಾಲಿ ಇರುವ ಸ್ಥಳಗಳಿಗೆ ಅರ್ಹ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ಇತರೇ ಹಿಂದುಳಿದ ವರ್ಗಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಂದ ವಸತಿ ನಿಲಯ ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶ ಬಯಸುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ಕಡ್ಡಾಯವಾಗಿ https://swd.karnataka.gov.in ಅಥವಾ https://swdhmis.karnataka.gov.in / ವೆಬ್‌ಸೈಟ್ ನಲ್ಲಿ ನೋಂದಣಿ ಮಾಡಿಕೊಂಡು ನಂತರ ಲಾಗಿನ್ ಐಡಿ ಹಾಗೂ ಪಾಸ್‌ವರ್ಡ್ ಬಳಸಿ E – KYC ಮುಖಾಂತರ ವಸತಿ ನಿಲಯಕ್ಕೆ ಅರ್ಜಿ ಸಲ್ಲಿಸುವುದು ಹಾಗೂ ಸಲ್ಲಿಸಿದ ಅರ್ಜಿಯನ್ನು ಪ್ರಿಂಟ್ ತೆಗೆದು-ಕೊಂಡು ದಾಖಲೆಗಳನ್ನು ಲಗತ್ತಿಸಿ ಸಂಬಂಧಿಸಿದ ಮುಖ್ಯೋಪಾಧ್ಯಯರಿಂದ ಅಗತ್ಯ ದಾಖಲೆಗಳನ್ನು ದೃಢೀಕರಿಸಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಸಮಾಜ ಕಲ್ಯಾಣ ಇಲಾಖೆ, ಶಿರಹಟ್ಟಿ ಇಲ್ಲಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಆಗಸ್ಟ್ 31 ಆಗಿದ್ದು ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳನ್ನು ಸೀಟುಗಳ ಲಭ್ಯತೆಯನುಸಾರ ಪ್ರವೇಶ ಒದಗಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಸಮಾಜಕಲ್ಯಾಣ ಇಲಾಖೆ ಶಿರಹಟ್ಟಿ ಕಾರ್ಯಾಲಯ ದೂರವಾಣಿ ಸಂಖ್ಯೆ 08487-295097 ಇಲ್ಲಿ ಸಂಪರ್ಕಿಸಬಹುದಾಗಿದೆ.

**ಆನ್‌ಲೈನ್ ಸಲ್ಲಿಸುವ ವೆಬ್‌ಸೈಟ್ ವಿಳಾಸ :** https?//swd.karnataka.gov.in / ಅಥವಾ https://swdhmis.karnataka.gov.in/

**ಅರ್ಜಿಗಳೊಂದಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಾಖಲೆಗಳು :**

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಸ್ವೀಕೃತಿ ಪ್ರತಿ. (ಸಂಬಂಧಿಸಿದ ಶಾಲಾ ಮುಖ್ಯೋಪಾದ್ಯಾಯರ ಸಹಿಯೊಂದಿಗೆ) , ವಿದ್ಯಾರ್ಥಿಗಳ SSP ID ಸಂಖ್ಯೆ. ವಿದ್ಯಾರ್ಥಿಗಳ ಆಧಾರ್ ಕಾರ್ಡ್ (ಝುರಾಕ್ಸ್ ಪ್ರತಿ), ವಿದ್ಯಾರ್ಥಿಗಳ ಆಧಾರ್ ಸಂಖ್ಯೆಗೆ ಜೋಡಣೆಯಾದ ಮೊಬೈಲ್ ಸಂಖ್ಯೆ, ವಿದ್ಯಾರ್ಥಿಗಳ ಜಾತಿ ಪ್ರಮಾಣ ಪತ್ರ.(ಝುರಾಕ್ಸ್ ಪ್ರತಿ), ಆದಾಯ ಪ್ರಮಾಣ ಪತ್ರ (ಝುರಾಕ್ಸ್ ಪ್ರತಿ),ವಿದ್ಯಾರ್ಥಿಗಳ 3 ಪಾಸ್ ಪೋರ್ಟ್ ಅಳತೆ ಭಾವಚಿತ್ರ, ವಿದ್ಯಾರ್ಥಿಗಳ ಹಿಂದಿನ ತರಗತಿಯ ಅಂಕಪಟ್ಟಿ ಪ್ರತಿ. (ಝುರಾಕ್ಸ್ ಪ್ರತಿ), ಪಡಿತರ ಚೀಟಿ (ರೇಷನ್ ಕಾರ್ಡ್ ಝುರಾಕ್ಸ್ ಪ್ರತಿ) ವಿದ್ಯಾರ್ಥಿ / ವಿದ್ಯಾರ್ಥಿನಿಯರ SSPI D ಸಂಖ್ಯೆಯನ್ನು ಸಂಬಂಧಿಸಿದ ಶಾಲಾ ಮುಖ್ಯೋಪಾದ್ಯಾಯರಿಂದ ಪಡೆದುಕೊಳ್ಳುವುದು ಎಂದು ಶಿರಹಟ್ಟಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗದಗ ರೈಲ್ವೆ ನಿಲ್ದಾಣಕ್ಕೆ ಶ್ರೀ ಪಂಡಿತ್ ಪುಟ್ಟರಾಜ ಗವಾಯಿಗಳವರ ಹೆಸರು ನಾಮಕರಣಕ್ಕೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ನವೀಕೃತ ರೈಲ್ವೆ ನಿಲ್ದಾಣಕ್ಕೆ ಶ್ರೀ ಗಾನಯೋಗಿ ಪಂ. ಪುಟ್ಟರಾಜ ಗವಾಯಿಗಳವರ ಹೆಸರು ನಾಮಕರಣ ಮಾಡಬೇಕೆಂದು ಕ್ರಾಂತಿ ಸೇನಾ ಗದಗ ಜಿಲ್ಲಾ ಸಂಘಟನೆ ವತಿಯಿಂದ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕ್ರಾಂತಿ ಸೇನಾ ಗದಗ ಜಿಲ್ಲಾ ಅಧ್ಯಕ್ಷ ಬಾಬು ಬಾಕಳೆ ಮಾತನಾಡಿ, ಗದುಗಿನ ನಡೆದಾಡುವ ದೇವರು, ಪವಾಡ ಪುರುಷರು, ಅಂಧ, ಅನಾಥರ ಆಶಾಕಿರಣ, ಕಣ್ಣಿಲ್ಲದಿದ್ದರೂ ಊರಿಗೆ ಕಣ್ಣಾಗಿ ಭಕ್ತರಿಗೆ ಆಶೀರ್ವಚನ ಮಾಡಿ ಉದ್ಧಾರ ಮಾಡಿದ ಮಹಾದೇವ ಮಾನವರು, ಹಸಿದು ಬಂದವರಿಗೆ ಅನ್ನದಾಸೋಹ ನೀಡಿದವರು ಪಂ ಪುಟ್ಟರಾಜರು.

ನಾವು ದೇವರನ್ನು ನೋಡಿಲ್ಲವಾದರೂ ಶ್ರೀ ಗುರು ಪುಟ್ಟರಾಜ ಗವಾಯಿಗಳರಲ್ಲಿ ನಾವು ಶಿವನ ಅವತಾರವನ್ನು ಕಂಡಿದ್ದೇವೆ. ಇಂತಹ ನಡೆದಾಡುವ ದೇವರ ಹೆಸರು ಗದಗ ರೈಲ್ವೆ ನಿಲ್ದಾಣಕ್ಕೆ ಇಡುವ ಮುಖಾಂತರ ಗವಾಯಿಗಳವರಿಗೆ ಗೌರವ ಸಲ್ಲಿಸಬೇಕು ಎಂದು ವಿನಂತಿಸಿದರು.

ಮನವಿ ಸ್ವೀಕರಿಸಿದ ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ ಮಾತನಾಡಿ, ನಿಮ್ಮ ಮನವಿಯನ್ನು ಪರಿಗಣಿಸಿ ಅಧಿಕಾರಿಗಳೊಂದಿಗೆ ಮಾತನಾಡಿ, ಆದಷ್ಟು ಶೀಘ್ರ ರೈಲು ನಿಲ್ದಾಣಕ್ಕೆ ಗವಾಯಿಗಳ ಹೆಸರು ನಾಮಕರಣಕ್ಕೆ ಶಿಫಾರಸು ಮಾಡುತ್ತೇವೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಶಿವಲಿಂಗ ಶಾಸ್ತ್ರೀ ಅಜ್ಜನವರು, ಕ್ರಾಂತಿ ಸೇನಾ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರವೀಣ್ ಹಬೀಬ್, ರಾಣಿ ಚಂದಾವರಿ, ಕ್ರಾಂತಿ ಸೇನಾ ತಾಲೂಕಾಧ್ಯಕ್ಷ ಭರತ್ ಮಾರಿಯಪ್ಪನವರ್, ಉಪಾಧ್ಯಕ್ಷ ಭೀಮಾ ಕಾಟಿಗರ್, ಕಿರಣ ಪಟ್ಟಣಶೆಟ್ಟಿ, ಸುನೀಲ್ ಅರಸಿದ್ಧಿ, ಅನುಪ, ಶಿವು ಕುಂಬಾರ ಮುಂತಾದವರು ಉಪಸ್ಥಿತರಿದ್ದರು.

# ಗಾಜಾಕ್ಕೆ ವಿಶ್ವಸಂಸ್ಥೆಯಿಂದ 100ಲಾರಿಗಳಲ್ಲಿ ಆಹಾರ ಸಾಮಗ್ರಿ ಪೂರೈಕೆ

■ವಿಜಯಸಾಕ್ಷಿ ಸುದ್ದಿ, ಗಾಜಾ



ವಿಶ್ವಸಂಸ್ಥೆಯ ತಂಡಗಳು ಗಾಜಾ ನಿರಾಶ್ರಿತರ ದಿನನಿತ್ಯದ ಅಗತ್ಯಕ್ಕಾಗಿ ಸಂಗ್ರಹಿಸಿದ್ದ 90ಕ್ಕೂ ಹೆಚ್ಚು ಲಾರಿ ಲೋಡ್‌ಗಳ ಮಾನವೀಯ ನೆರವು ಪ್ರವೇಶಕ್ಕೆ ಇಸ್ರೇಲ್ 11 ವಾರಗಳ ದೀರ್ಘಾವಧಿಯ ದಿಗ್ಬಂಧನದ ನಂತರ ಅನುವು ಮಾಡಿದೆ.

ಹಿಟ್ಟು, ಶಿಶು ಆಹಾರ ಮತ್ತು ವೈದ್ಯಕೀಯ ಉಪಕರಣಗಳನ್ನು ಒಳಗೊಂಡ ಸಹಾಯವನ್ನು ಬುಧವಾರ ರಾತ್ರಿ ಕೆರೆಮ್ ಶಾಲೋಮ್ ಕ್ರಾಸಿಂಗ್‌ನಿಂದ ತೆಗೆದುಕೊಂಡು ವಿತರಣೆಗಾಗಿ ಗೋದಾಮುಗಳಿಗೆ ಸಾಗಿಸಲಾಯಿತು. ಗುರುವಾರ ಹಲವಾರು ಬೇಕರಿಗಳು ಹಿಟ್ಟಿನಿಂದ ಬ್ರೆಡ್ ಉತ್ಪಾದಿಸಲು ಪ್ರಾರಂಭಿಸಿದವು. ಇಸ್ರೇಲ್ ಮಿಲಿಟರಿ ಅನುಮೋದಿಸಿದ ಏಕ ಪ್ರವೇಶ ಮಾರ್ಗದಲ್ಲಿ ಭದ್ರತೆ-ಯ ಕೊರತೆಯಿಂದಾಗಿ ಮೂರು ದಿನ ವಿಳಂಬವಾಗಿದೆ ಎಂದು ವಿಶ್ವಸಂಸ್ಥೆ ಹೇಳಿದೆ.

ಇಸ್ರೇಲಿ ಅಧಿಕಾರಿಗಳು ಬುಧವಾರ ಕೆರೆಮ್ ಶಾಲೋಮ್ ಮೂಲಕ ಹೆಚ್ಚುವರಿಯಾಗಿ 100 ಲಾರಿ ಲೋಡ್‌ಗಳ ಪ್ರವೇಶಕ್ಕೆ ಅನುಮತಿಸಿದ್ದಾರೆ ಎಂದು ಹೇಳಿದ್ದಾರೆ. "ಗಾಜಾದಲ್ಲಿನ ಅಪಾರ ಅಗತ್ಯಗಳನ್ನು ಪೂರೈಸಲು ಅದು ಎಲ್ಲಿಯೂ ಸಾಕಾಗುವುದಿಲ್ಲ. ಯುದ್ಧದ ಮೊದಲು ಪ್ರತಿದಿನ ಸರಾಸರಿ 500 ಲಾರಿಗಳು ಪ್ರದೇಶವನ್ನು ಪ್ರವೇಶಿಸುತ್ತಿದ್ದವು" ಎಂದು ವಿಶ್ವಸಂಸ್ಥೆ ಹೇಳಿದೆ.

ಅಗತ್ಯ ಆಹಾರಗಳ ಗಮನಾರ್ಹ ಕೊರತೆ ಮತ್ತು ಗಗನಕ್ಕೇರುತ್ತಿರುವ ಬೆಲೆಗಳ ನಡುವೆ, 2.1 ಮಿಲಿಯನ್ ಜನಸಂಖ್ಯೆಯಲ್ಲಿ ತೀವ್ರ ಮಟ್ಟದ ಹಸಿವಿನ ಬಗ್ಗೆ ಮಾನವೀಯ ಸಂಘಟನೆಗಳು ಎಚ್ಚರಿಸಿವೆ ಎಂದು ಆಕ್ರಮಿತ ಪಶ್ಚಿಮ ದಂಡೆಯಲ್ಲಿ ನೆಲೆಸಿರುವ ಪ್ಯಾಲೆಸ್ಟೀನಿಯನ್ ಪ್ರಾಧಿಕಾರದ ಆರೋಗ್ಯ ಸಚಿವ ಮಜೀದ್ ಅಬು ರಂಜಾನ್ ಗುರುವಾರ ಸುದ್ದಿಗಾರರಿಗೆ ತಿಳಿಸಿದ್ದಾರೆ.

## ಶ್ರೀರಾಮ ಸೇನೆ ಮುಖಂಡ ರಾಜು ಖಾನಪ್ಪನವರ ಕರೆ

# ಮೇ.26ಕ್ಕೆ "ಗದಗ ಬಂದ್"

■ವಿಜಯಸಾಕ್ಷಿ ಸುದ್ದಿ, ಗದಗ




ಅವಧಿಗೂ ಮೀರಿದ ತೊಂಟ-ದಾರ್ಯ ಮಠದ ಜಾತ್ರೆ ವಿರೋಧಿಸಿ ಹಾಗೂ ಬಡ ಬೀದಿ ಬದಿ ವ್ಯಾಪಾರಸ್ಥರ ಬದುಕಿಗಾಗಿ ಮೇ.26 ರಂದು ಬೆಳಗ್ಗೆ 6ರಿಂದ ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ, ಶ್ರೀರಾಮ ಸೇನೆ, ಶ್ರೀರಾಮ ಸೇನೆ ದಲಿತ ಮಿತ್ರ ಮೇಳ, ಆಟೋ ಸೇನಾ ಹಾಗೂ ಹಿಂದುಳಿದ ಹಾಗೂ ವಿವಿಧ ಕನ್ನಡಪರ ಸಂಘಟನೆ ವತಿಯಿಂದ "ಗದಗ ಬಂದ್" ಗೆ ಕರೆ ನೀಡಲಾಗಿದೆ ಎಂದು ಶ್ರೀರಾಮ ಸೇನೆ ರಾಜ್ಯ ಕಾರ್ಯದರ್ಶಿ ರಾಜು ಖಾನಪ್ಪನವರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 6ಕ್ಕೆ ನಗರದ ಕಾಶಿ ಕರಬಸಪ್ಪನವರ ಗದ್ದುಗೆಗೆ 11 ಬಿಂದಿಗೆಗಳಿಂದ ಅಭಿಷೇಕ ಮಾಡಿ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿ ತಲುಪಿ ಮನವಿ ಸಲ್ಲಿಸಲಾಗುವುದು. ಮೆರವಣಿಗೆಯಲ್ಲಿ ವಿವಿಧ ಸಂಘಟನೆಯ ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸಲಿದ್ದು, ಯಾವುದೇ ಅಹಿತಕರ ಘಟನೆ ನಡೆದರೂ ಅಚ್ಚರಿ ಪಡಬೇಕಿಲ್ಲ. ಇದೇ ವೇಳೆ ಜಾತ್ರಾ ಮಳಿಗೆಗಳಿಗೆ ಮುತ್ತಿಗೆ ಹಾಕಬಹುದು, ಜತೆಗೆ ಸಂಘರ್ಷ ಕೂಡ ನಡೆಯಬಹುದು ಎಂದು ಎಚ್ಚರಿಕೆ ನೀಡಿದರು.

> ಮೇ.26ರಂದು ನಡೆಯುವ ಬಂದ್ ವೇಳೆ ಅಗತ್ಯ ವಸ್ತುಗಳಿಗೆ ಅನುವು ಮಾಡಿಕೊಡಲಾಗಿದೆ. ಹಾಲು, ಪತ್ರಿಕೆ, ಆಸ್ಪತ್ರೆ, ಅಂಬುಲೆನ್ಸ್, ಮೆಡಿಕಲ್ ಶಾಪ್ ಸೇರಿದಂತೆ ವಿವಿಧ ಅಗತ್ಯ ವಸ್ತುಗಳ ಮಾರಾಟಕ್ಕೆ ಹಾಗೂ ಅಂಗಡಿಗಳಿಗೆ ಅನುವು ಮಾಡಿಕೊಡಲಾಗಿದೆ. ಇವುಗಳನ್ನು ಹೊರತುಪಡಿಸಿ ಎಲ್ಲವನ್ನು ಬಂದ್ ಮಾಡಲಾಗುತ್ತದೆ. ಸ್ಥಳೀಯ ವ್ಯಾಪಾರಸ್ಥರು ಸಹಕಾರ ನೀಡಿ, ಸಣ್ಣ-ಪುಟ್ಟ ವ್ಯಾಪಾರಸ್ಥರ ಹಿತ ಕಾಪಾಡಬೇಕು.
>
> –ರಾಜು ಖಾನಪ್ಪನವರ, ಶ್ರೀರಾಮ ಸೇನೆ ಮುಖಂಡ,

ಜಿಲ್ಲಾಡಳಿತ, ಪೊಲೀಸ್ ಇಲಾಖೆ, ನಗರಸಭೆ, ಮಠದ ಆಡಳಿತ ಮಂಡಳಿಗಳಿಗೆ ಮನವಿ ಮಾಡಿಕೊಂಡು ಬಂದರೂ ಕೂಡ ಇವರೆಲ್ಲರೂ ಬೇರೆ ರಾಜ್ಯದ ವ್ಯಾಪಾರಸ್ಥರ ಪರವಾಗಿ ಕೆಲಸ ಮಾಡುತ್ತಿದ್ದಾರೆ. ಇದು ಅತ್ಯಂತ ನೋವಿನ ಸಂಗತಿಯಾಗಿದೆ. ಮಠದ ಜಾತ್ರೆ ವಿರುದ್ಧ ಸ್ಥಳೀಯ ವ್ಯಾಪಾರಸ್ಥರಂತೂ ರೋಸಿ ಹೋಗಿದ್ದಾರೆ ಎಂದು ಆರೋಪಿಸಿದರು.

ಜಾತ್ರೆ ನಡೆಯುವ ಒಂದು ತಿಂಗಳ ಮುನ್ನ ಸ್ಥಳೀಯ ವ್ಯಾಪಾರಸ್ಥರ ವ್ಯಾಪಾರ ಕುಂಠಿತಗೊಂಡಿದೆ. ಎರಡು ತಿಂಗಳು ಅವಧಿಗೂ ಮೀರಿದ ಜಾತ್ರೆ ನಡೆಯುವುದರಿಂದ ವ್ಯಾಪಾರಸ್ಥರಿಗೆ ದಿಕ್ಕು ತೋಚದಂತಾಗಿದ್ದು, ಒಂದು ವರ್ಷದಲ್ಲಿ ಬರೋಬ್ಬರಿ ಐದು ತಿಂಗಳು ಖಾಲಿ ಕೈಯಲ್ಲಿ ಇರುವ ಪರಿಸ್ಥಿತಿ ಇದೆ. ಇದಕ್ಕೆಲ್ಲ ತೋಂಟದಾರ್ಯ ಮಠದ ಆಡಳಿತ ಮಂಡಳಿ, ಜಿಲ್ಲಾಡಳಿತ, ನಗರಸಭೆ ಹಾಗೂ ಪೊಲೀಸ್ ಇಲಾಖೆ ನೇರ ಹೊಣೆಯಾಗಿದೆ ಎಂದು ರಾಜು ಖಾನಪ್ಪನವರ ಆರೋಪಿಸಿದರು.

ವ್ಯಾಪಾರಸ್ಥ ಪ್ರಹ್ಲಾದ್ ಅಗಸಿಮನಿ, ಶಂಕರ್ ಮಲಜಿ, ಕಾರ್ತಿಕ್ ಲದ್ವಾ, ಮಂಜುನಾಥ ಕುಂಟೆ, ಕುಮಾರ ನಡಗೇರಿ, ಕುಮಾರ ಮಿಟ್ಟಿಮಠ, ಸೋಮು ಗುಡಿ, ಮಹೇಶ ರೋಖಡೆ, ಶಿವಯೋಗಿ ಹಿರೇಮಠ, ವೆಂಕಟೇಶ ದೊಡ್ಡಮನಿ, ಸತೀಶ್ ಕುಂಬಾರ, ಮಹಾಂತೇಶ ಪಾಟೀಲ, ಕಿರಣ್ ಹಿರೇಮಠ, ಹುಲಗಪ್ಪ ವಾಲ್ಮೀಕಿ, ವಿಶ್ವನಾಥ ಸಿರಿ, ರವಿ ಜಾಲಗಾರ ಇದ್ದರು.

# ನರ್ಸಿಂಗ್ ಶಿಕ್ಷಣಕ್ಕೆ ಹೆಚ್ಚಿನ ಬೇಡಿಕೆಯಿದೆ

▶▶ಮೊದಲನೇ ಪುಟದಿಂದ



ಮೆಚ್ಚುವಂತದ್ದು. ಕಾಲೇಜು ಸುಸಜ್ಜಿತವಾಗಿದ್ದು, ಸರಕಾರದಿಂದ ಸಿಗಬಹುದಾದ ಎಲ್ಲ ಸೌಲಭ್ಯಗಳು ಸಿಗುವಂತಾಗಲಿ ಎಂದರು.

ಕಾಲೇಜಿನ ಸಂಸ್ಥಾಪಕ ಅಧ್ಯಕ್ಷ ಎಸ್.ವ್ಹಿ. ಸಂಕನೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿನ್ಸೆಂಟ್ ಪಾಟೀಲ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ್, ಪ್ರೊ. ದತ್ತಪ್ರಸನ್ನ ಪಾಟೀಲ ನಿರೂಪಿಸಿ ವಂದಿಸಿದರು.

ವೇದಿಕೆಯ ಮೇಲೆ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಯುವ ಧುರೀಣ ಭರತ್ ಬೊಮ್ಮಾಯಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ ಸಾಬ ಬಬರ್ಚಿ, ಸಿನೆಟ್ ಸದಸ್ಯ ಡಾ. ವೀರೇಶ ಹಂಚಿನಾಳ, ಕಳಸಾಪೂರ ಗ್ರಾ.ಪಂ ಅಧ್ಯಕ್ಷೆ ಅನಸೂಯಾ ಬೆಟಗೇರಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಸಿಇಓ ಭರತ್ ಎಸ್, ಎಸ್ಪಿ ಬಿ.ಎಸ್. ನೇಮಗೌಡ, ರಾಜು ಕುರಡಗಿ, ಡಾ. ಪ್ರಕಾಶ ಸಂಕನೂರ, ಡಾ. ಶ್ವೇತಾ ಸಂಕನೂರ, ಮೋಹನ ಸಿದ್ಧಾಂತಿ, ಮೀನಾಕ್ಷಿ ದೇವಾಂಗಮಠ, ಶರಣಮ್ಮ ಸಂಕನೂರ, ಸಂಕನೂರ ಸಹೋದರರು ಉಪಸ್ಥಿತರಿದ್ದರು.

## ಸಾರ್ವಜನಿಕರ ಮನವಿ ವಿರೋಧಿಸಿ ವಿದ್ಯುತ್ ಕಂಬ ಅಳವಡಿಸಿದ್ದ ಹೆಸ್ಕಾಂ | ತಂತಿ ತಗುಲಿ ಸುಟ್ಟು ಧರೆಗುರುಳಿದ ಮರ

# ಇಲ್ಲಿ ಅಪಾಯವಿದೆ, ಎಚ್ಚರಿಕೆ!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಬ್ಬಿಗೇರಿ-ರೋಣ-ಪಾಲಾ-ಬದಾಮಿ ಮುಖ್ಯ ರಸ್ತೆಯ ಎಡ ಬದಿಯಲ್ಲಿ ವಿದ್ಯುತ್ ಸರಬರಾಜು ತಂತಿ ಅಳವಡಿಸುವಾಗ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ್ದರು. ಮುಖ್ಯ ರಸ್ತೆಯ ಸೌಂದರ್ಯವನ್ನು ಹೆಚ್ಚಿಸುತ್ತಿರುವ ಮತ್ತು ಬೇಸಿಗೆಯಲ್ಲಿ ಕೃಷಿಕರಿಗೆ, ಪಾದಚಾರಿಗಳಿಗೆ ನೆರಳು ನೀಡುವ ದೊಡ್ಡ ದೊಡ್ಡ ಹುಣಸೆ ಮರಗಳು ಈ ಮಾರ್ಗದಲ್ಲಿದ್ದು, ಹೆಸ್ಕಾಂನಿಂದ ವಿದ್ಯುತ್ ಕಂಬ, ತಂತಿಗಳನ್ನು ಅಳವಡಿಸಿದರೆ ಮರಗಳನ್ನು ಕಡಿಯಬೇಕಾಗುತ್ತದೆ. ಇದರಿಂದ ಅಪಾರ ಹಾನಿಯಾಗುತ್ತದೆ ಎಂದು ಲಿಖಿತ ಅರ್ಜಿಗಳ ಮೂಲಕ ಸಂಬಂಧಪಟ್ಟ ಅಧಿಕಾರಿಗಳಿಗೆ ವಿನಂತಿಸಲಾಗಿತ್ತು. ಸಾರ್ವಜನಿಕರ ವಿರೋಧದ ನಡುವೆ, ಹೆಸ್ಕಾಂ ವಿದ್ಯುತ್ ಕಂಬ ಹಾಗೂ ಮರಗಳ ನಡುವೆಯೇ



ತಂತಿಗಳನ್ನು ಅಳವಡಿಸಿತ್ತು. ಇದೇ ಸಂದರ್ಭದಲ್ಲಿ ಅಟಲ್ ಜೀ ವಸತಿ ಶಾಲೆಗೆ ವಿದ್ಯುತ್ ಸಂಪರ್ಕ ಕಲ್ಪಿಸಿದ್ದಾರೆ. ಪರಿಣಾಮ, ನಿತ್ಯವೂ ವಿದ್ಯುತ್ ತಂತಿ ಮರದ ಟೊಂಗೆಗಳಿಗೆ ಸ್ಪರ್ಶಿಸಿ ದೊಡ್ಡ ಮರದ ವಾಲಿಯಲ್ಲಿ ಬೆಂಕಿ ಹತ್ತಿಕೊಂಡ ಪರಿಣಾಮ ಮರವೀಗ ಧರೆಗುರುಳಿದೆ. ಆದರೆ, ರಸ್ತೆಯಲ್ಲಿ ಯಾವುದೇ ಬೈಕ್ ಸವಾರು, ಕೃಷಿ ಕಾರ್ಮಿಕರು ಇಲ್ಲದಿರುವುದರಿಂದ ಅನಾಹುತ ತಪ್ಪಿದೆ. ಅಟಲ್ ಜೀ ವಸತಿ ಶಾಲೆಗೆ ವಿದ್ಯುತ್ ಸಂಪರ್ಕ ಕಲ್ಪಿಸುವುದು ಅನಿವಾರ್ಯವಾಗಿರುವು ದ-ರಿಂದ ಹೆಸ್ಕಾಂ ಇಲಾಖೆಯಿಂದ ಮರಗಳ ಮಧ್ಯ ಹಾದು ಹೋಗುವ ತಂತಿಗಳಿಗೆ ಪಿವಿಸಿ ಪೈಪ್ ಅಳವಡಿಸಿದ್ದಾರೆ. ಆದರೆ, ಆ ಪೈಪ್ ನಿತ್ಯವೂ ಸುಡುತ್ತಲೇ ಬಂದಿದ್ದರಿಂದ ಗಿಡದ ಟೊಂಗೆಗೆ ಬೆಂಕಿ ಹೊತ್ತಿಕೊಂಡಿದೆ.

ಅಬ್ಬಿಗೇರಿ-ರೋಣ ಮುಖ್ಯ ರಸ್ತೆಯ ಪಕ್ಕದಲ್ಲಿ ವಿದ್ಯುತ್ ಕಂಬಗಳಿಂದ ಹಾದು ಹೋಗಿರುವ ತಂತಿಗಳ ಕೆಳಗೆ ಅರಣ್ಯ ಇಲಾಖೆ ವತಿಯಿಂದ ಗಿಡಗಳನ್ನು ನೆಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಗಿಡ ಬೆಳೆದು ಮರವಾದಾಗ ವಿದ್ಯುತ್ ಕಂಬಕ್ಕೆ ಟೊಂಗೆಗಳು ಸ್ಪರ್ಶಿಸುವುದು ಖಚಿತ. ಇದು ನೀರಲ್ಲಿ ಹುಣಸೆಹಣ್ಣು ತೊಳೆದಂತಾಗುತ್ತದೆ ಎಂದು ಸಾರ್ವಜನಿಕರು ಆಡಿಕೊಳ್ಳುವಂತಾಗಿದೆ.

ಅಬ್ಬಿಗೇರಿ-ರೋಣ ರಸ್ತೆಯಲ್ಲಿ ವಿದ್ಯುತ್ ತಂತಿ ತಗುಲಿ ಮರ ಸುಟ್ಟು ಬಿದ್ದಿರುವ ಮರದ ಬಗ್ಗೆ ಮಾಹಿತಿ ಬಂದಿದ್ದು, ತಂತಿ ಹಾದು ಹೋಗುವ ಸ್ಥಳದಲ್ಲಿ ರೆಂಬೆ-ಕೊಂಬೆಗಳು ಇದ್ದರೆ ಕಡಿಯಲು ನಾನೇ ಅನುಮತಿಯನ್ನು ನೀಡಿದ್ದೇನೆ. ಅಟಲ್ ಜೀ ವಸತಿ ಶಾಲೆಗೆ ವಿದ್ಯುತ್ ಸಂಪರ್ಕ ನೀಡುವುದು ಅನಿವಾರ್ಯವಾಗಿದೆ. ಬೇರೆ ಸ್ಥಳ ಇಲ್ಲದ ಕಾರಣ ಮರಗಳ ನಡುವೆಯೇ ವಿದ್ಯುತ್ ತಂತಿಗಳನ್ನು ತೆಗೆದುಕೊಂಡು ಹೋಗುವ ಪರಿಸ್ಥಿತಿ ಇದೆ. ಮುಂದಿನ ದಿನಗಳಲ್ಲಿ ಇಲಾಖೆ ವತಿಯಿಂದ ಬೇರೆ ವ್ಯವಸ್ಥೆ ಮಾಡುವ ಕುರಿತು ಚರ್ಚೆ ಮಾಡುತ್ತೇವೆ.

**– ರಾಘವೇಂದ್ರ ವಿ. ಸಾಲಮನಿ.**
ಹೆಸ್ಕಾಂ ಅಭಿಯಂತರ,
ರೋಣ ಉಪವಿಭಾಗ.

ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ರೈತರು ಮತ್ತು ದ್ವಿಚಕ್ರ ವಾಹನ ಸವಾರರು ಮರದ ಕೆಳಗೆ ಹೋಗಿ ನಿಲ್ಲುವುದು ಸಹಜ. ಆದರೆ, ವಿದ್ಯುತ್ ತಂತಿಗಳಿಂದ ಇಂತಹ ಅಪಾಯಗಳು ಸಂಭವಿಸುವ ಸಾಧ್ಯತೆಯಿದೆ. ಆದ್ದರಿಂದ ಹೆಸ್ಕಾಂ ಗಿಡ-ಮರಗಳನ್ನು ಬಿಟ್ಟು ಕಂಬಗಳನ್ನು ಅಳವಡಿಸಿ ವಿದ್ಯುತ್ ಸರಬರಾಜು ಮಾಡಿದರೆ ಅನುಕೂಲವಾಗುತ್ತದೆ. ಇದರಿಂದ ಮರ-ಗಿಡಗಳಿಗೆ ಕೊಡಲಿ ಏಟು ಬೀಳುವುದೂ ತಪ್ಪುತ್ತದೆ.

**–ಮಂಜುನಾಥ ಚೌಡರ ವಕೀಲರು.**
ಅಬ್ಬಿಗೇರಿ ಗ್ರಾಮದ ನಿವಾಸಿ.

# ಇತಿಹಾಸ ಅರಿಯಲು ದೃಶ್ಯ ಕಲೆಗಳು ಅವಶ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ದೇಶದ, ನಾಡಿನ ಇತಿಹಾಸ ಅರಿಯಲು ಇಂತಹ ದೃಶ್ಯ ಕಲೆಗಳ ಪ್ರದರ್ಶನ ಅವಶ್ಯ ಎಂದು ಡಾ॥ ಅನ್ನದಾನಿ ಹಿರೇಮಠ ಅಭಿಪ್ರಾಯಪಟ್ಟರು.

ಅವರು ಡೋಣಿ ಗ್ರಾಮದಲ್ಲಿ ಗದುಗಿನ ಲಯಕಲಾ ಮನೆ ಸಂಸ್ಥೆಯ 32ನೇ ವಾರ್ಷಿಕೋತ್ಸವ ಹಾಗೂ ಕಲಾವಿದರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಚಿತ್ರಕಲಾವಿದ ಶಂಕರಗೌಡ ಪಾಟೀಲ ಇವರು ಸಂಗ್ರಹಿಸಿ, ಪ್ರದರ್ಶಿಸಿದ ರಂಗಭೂಮಿ ಕಲಾವಿದರ ಛಾಯಾಚಿತ್ರಗಳ ಪ್ರದರ್ಶನ ವೀಕ್ಷಿಸಿ ಮಾತನಾಡಿದರು.

ಇತಿಹಾಸದ ಘಟನೆಗಳನ್ನು ರಂಗಕಲಾವಿದರು ತಮ್ಮ ಅಭಿನಯದ ಮೂಲಕ ಪ್ರದರ್ಶಿಸಿದಾಗ ಜನರಲ್ಲಿ ಆ ಘಟನೆಗಳ ಮೂಲಕ ಇತಿಹಾಸವನ್ನು ತಿಳಿಯಲು ನೆರವಾಗುತ್ತದೆ. ಚಿತ್ರಕಲೆಗಳ ಮೂಲಕ ಇತಿಹಾಸದ ಘಟನೆಗಳನ್ನು ಚಿತ್ರಿಸಿದಾಗ ಜನರಲ್ಲಿ ಅರಿವು ಮೂಡಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಪ್ರಶಸ್ತಿ ಪ್ರದಾನ ನೆರವೇರಿಸಿದ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಪ್ರದರ್ಶನ ವೀಕ್ಷಿಸಿ ಮಾತನಾಡಿ, ಇಂತಹ ಕಾರ್ಯಕ್ರಮಗಳು ಗ್ರಾಮೀಣ ಪ್ರದೇಶದಲ್ಲಿ ಇನ್ನಷ್ಟು ನಡೆಯಲಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪ್ರದರ್ಶನವನ್ನು ಡೋಣಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಹುಲಿಗೆಮ್ಮ ಅಳವಂಡಿ ಉದ್ಘಾಟಿಸಿ ಮಾತನಾಡಿ, ಇಂತಹ ಕಾರ್ಯಕ್ರಮಗಳು ಗ್ರಾಮೀಣ ಪ್ರದೇಶದಲ್ಲಿ ಹೆಚ್ಚೆಚ್ಚು ನಡೆದಾಗ ಇಂದಿನ ಮಕ್ಕಳಿಗೆ ನಮ್ಮ ದೇಶದ ಮತ್ತು ನಾಡಿನ ಇತಿಹಾಸ ತಿಳಿಯಲು ಅನುಕೂಲವಾಗುತ್ತದೆ ಎಂದು ನುಡಿದರು.

# ಅತಿಥಿ ಶಿಕ್ಷಕರಿಗೆ ಸಿಹಿ ಸುದ್ದಿ ನೀಡಿದ ಸರ್ಕಾರ: 51 ಸಾವಿರ ಶಿಕ್ಷಕರ ನೇಮಕಕ್ಕೆ ಆದೇಶ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅತಿಥಿ ಶಿಕ್ಷಕರಿಗೆ ಸರ್ಕಾರ ಗುಡ್ ನ್ಯೂಸ್ ಕೊಟ್ಟಿದೆ. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆಯು ರಾಜ್ಯಾದ್ಯಂತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ 51,000 ಅತಿಥಿ ಶಿಕ್ಷಕರನ್ನು ನೇಮಿಸುವ ಆದೇಶ ನೀಡಿದೆ. ಇದಕ್ಕೆ ಸಂಬಂಧಿಸಿದಂತೆ ಅತಿಥಿ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ನೋಟಿಫಿಕೇಶನ್ ಪ್ರಕಟಿಸಿದೆ.

ಹೌದು 2025-26ರ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ 51,000 ಅತಿಥಿ ಶಿಕ್ಷಕರನ್ನು ನೇಮಿಸುವ ಆದೇಶ ಹೊರಡಿಸಿದ್ದು, ಮೇ 29, 2025 ರಂದು ಶಾಲೆಗಳು ಪುನರಾರಂಭವಾಗಲಿರುವ ಹಿನ್ನೆಲೆಯಲ್ಲಿ ಶೈಕ್ಷಣಿಕ ಚಟುವಟಿಕೆಗಳು ನಿರಂತರವಾಗಿ ಹಾಗೂ ಸಮಯಕ್ಕೆ ಸರಿಯಾಗಿ ಆರಂಭವಾಗಲಿ ಎಂಬ ಉದ್ದೇಶದಿಂದ ಈ ತಾತ್ಕಾಲಿಕ ನೇಮಕಾತಿಗೆ ಆದೇಶ ಹೊರಡಿಸಿದೆ.

2025-26ನೇ ಶೈಕ್ಷಣಿಕ ಸಾಲಿಗೆ ಖಾಲಿಯಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಕರುಗಳ ಹುದ್ದೆಗಳಿಗೆ ಅನುಗುಣವಾಗಿ ಶೈಕ್ಷಣಿಕ ಹಿತದೃಷ್ಟಿಯಿಂದ ಅತಿಥಿ ಶಿಕ್ಷಕರುಗಳನ್ನು ತಾತ್ಕಾಲಿಕವಾಗಿ ನೇರ ನೇಮಕಾತಿ ಮೂಲಕ ಭರ್ತಿ ಮಾಡುವವರೆಗೆ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಎಂಬ ಷರತ್ತಿಗೊಳಪಟ್ಟು ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ. ರಾಜ್ಯ ಸರ್ಕಾರದ ಈ ತ್ವರಿತ ಕ್ರಮವು ವಿದ್ಯಾರ್ಥಿಗಳ ಶಿಕ್ಷಣ ನಿರಂತರವಾಗಿರಿಸಲು ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸುತ್ತದೆ. 51,000 ಅತಿಥಿ ಶಿಕ್ಷಕರ ಪೈಕಿ 40,000ರನ್ನು ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಹಾಗೂ ಉಳಿದ 11,000ರನ್ನು ಸರ್ಕಾರಿ ಪ್ರೌಢ ಶಾಲೆಗಳಿಗೆ ನೇಮಿಸಿ ಆದೇಶಿಸಿದೆ.

# ನವೀಕೃತ ರೈಲ್ವೆ ನಿಲ್ದಾಣಕ್ಕೆ ಲಿಂ. ಪುಟ್ಟರಾಜ ಗವಾಯಿಗಳವರ ಹೆಸರಿಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನಲ್ಲಿ ನವೀಕೃತಗೊಂಡ ರೈಲ್ವೆ ನಿಲ್ದಾಣಕ್ಕೆ ಗದುಗಿನ ನಡೆದಾಡುವ ದೇವರು ಲಿಂ. ಶ್ರೀ ಗಾನಯೋಗಿ ಡಾ. ಪಂ. ಪುಟ್ಟರಾಜ ಗವಾಯಿಗಳವರ ಹೆಸರು ನಾಮಕರಣ ಮಾಡುವಂತೆ ಕರ್ನಾಟಕ ರಾಜ್ಯ ಶ್ರೀ ಡಾ. ಪಂ. ಪುಟ್ಟರಾಜ ರೈತ ಸಂಘದ ವತಿಯಿಂದ ಹಾಗೂ ಭಕ್ತರ ಪರವಾಗಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿಯವರಿಗೆ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಎಂ.ಪಿ. ಮುಳಗುಂದ ನೇತೃತ್ವದಲ್ಲಿ ಮನವಿ ಸಲ್ಲಿಸಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಂ.ಪಿ. ಮುಳಗುಂದ ಮಾತನಾಡಿ ಅಂಧ, ಅನಾಥ ಲಕ್ಷಾಂತರ ಮಕ್ಕಳಿಗೆ ಆಶ್ರಯ ನೀಡಿ ಶಿಕ್ಷಣ ಮತ್ತು ಸಂಗೀತ ಶಿಕ್ಷಣ ನೀಡಿ, ಅನೇಕ ಕಲಾವಿದರಿಗೆ ಆಶ್ರಯ ನೀಡಿ ಪ್ರೋತ್ಸಾಹ ನೀಡಿದ ಪೂಜ್ಯರ ಹೆಸರನ್ನು ನವಿಕೃತಗೊಂಡ ರೈಲ್ವೆ



ನಿಲ್ದಾಣಕ್ಕೆ ಇಡಬೇಕೆಂದು ಕಳೆದ ಐದು ವರ್ಷಗಳಿಂದ ನಿರಂತರ ಹೋರಾಟ ಮಾಡುತ್ತಿದ್ದೇವೆ. ನಮ್ಮ ಹೋರಾಟಕ್ಕೆ ತಾವು ಸ್ಪಂದಿಸಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಯುವ ಘಟಕದ ಅಧ್ಯಕ್ಷ ಸಿರಾಜ ಲಕ್ಕುಂಡಿ, ಗದಗ ಜಿಲ್ಲಾ ಕಾರ್ಯದರ್ಶಿ ಬಸವರಾಜ ಮುಧೋಳಮಠ, ಶಂಕರಗೌಡ್ರ ಪಾಟೀಲ, ವೆಂಕಟೇಶ ಜುಂಜಣಿ, ಶೇಖಪ್ಪ ಕಾತರಕಿ, ರೇಖಾ ಹುಲ್ಲೂರು, ಶಂಭುಲಿಂಗೇಶ ಗಾಣಿಗೇರ, ಆನಂದ ಹಂಚಿನಾಳ, ಶಂಭು ಅಂಗಡಿ, ಮನೋಹರ ಕರ್ಣಿ, ಪರವೀನ ನದಾಫ, ಮಾರಮ್ಮ ಹಾವೇರಿ, ಸರ್ಫರಾಜ, ಆದಿಲ್, ಮುತ್ತುರಾಜ, ಸೋಫಿಯಾ ನದಾಫ್ ಸೇರಿದಂತೆ ಪಂಡಿತ ಪುಟ್ಟರಾಜ ಗವಾಯಿಗಳು ಸದ್ಭಕ್ತರು ಉಪಸ್ಥಿತರಿದ್ದರು.

# ಡಾ. ಅಂಬೇಡ್ಕರ್ ಭಾವಚಿತ್ರ ಅಳವಡಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ರೈಲ್ವೆ ನಿಲ್ದಾಣದ ಮುಂಭಾಗದಲ್ಲಿ ಡಾ. ಬಿ.ಆರ್. ಅಂಬೇಡ್ಕರರ ಭಾವಚಿತ್ರ ಅಳವಡಿಸುವಂತೆ ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿಯವರಿಗೆ ಜೈ ಭೀಮ ಸಂಘರ್ಷ ರಾಜ್ಯ ಸಮಿತಿ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ವಾಯ್.ಹುಬ್ಬಳ್ಳಿಯವರ ನೇತೃತ್ವದಲ್ಲಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗಣೇಶ ವಾಯ್.ಹುಬ್ಬಳ್ಳಿ ಮಾತನಾಡಿ, ನವೀಕೃತ ಗದಗ ರೈಲ್ವೆ ನಿಲ್ದಾಣದಲ್ಲಿ ಒಳಗಡೆ ಅಥವಾ ಹೊರಗಡೆ ಡಾ. ಬಿ.ಆರ್. ಅಂಬೇಡ್ಕರರ ಭಾವಚಿತ್ರವನ್ನು ಅಳವಡಿಸಬೇಕು. ಡಾ. ಬಿ.ಆರ್. ಅಂಬೇಡ್ಕರರ ಭಾವಚಿತ್ರವನ್ನು ರಾಜ್ಯದ ಎಲ್ಲಾ ರೈಲು ನಿಲ್ದಾಣಗಳಲ್ಲಿ ಅಳವಡಿಸಲಾಗಿದೆ.



ಆದರೆ ಗದಗ ರೈಲು ನಿಲ್ದಾಣದಲ್ಲಿ ಅಳವಡಿಸಲಾಗಿಲ್ಲ ಎಂದರು.

ಈ ಸಂದರ್ಭದಲ್ಲಿ ಸಮಿತಿಯ ಉಪಾಧ್ಯಕ್ಷ ಮಂಜುನಾಥ ಎಫ್. ತೌಜೂಲ್, ನಗರಸಭೆಯ ಮಾಜಿ ಸದಸ್ಯ ಬಾಬು ಬಳ್ಳಾರಿ, ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಇಮಾಮಹುಸೇನ ಕುನ್ನಿಬಾವಿ, ರಾಷ್ಟ್ರೀನ್ ಜೋಸೆಫ, ನಜೀರ ಕುನ್ನಿಬಾವಿ, ರಾಜೇಶ ಶಟ್ಟರ, ಬಸವರಾಜ ಬದಾಮಿ, ರಫೀಕ ನವಲಗುಂದ, ಫರದೀನ ಕಾತಾಪೂರ, ಶಿವು ಕಡಿವಾಳ, ಶ್ರೀಕಾಂತ ಅಲವಾಗಲಿ, ಪ್ರೇಮ ಹುಬ್ಬಳ್ಳಿ, ಹೇಮಂತ ಹುಬ್ಬಳ್ಳಿ ಇನ್ನಿತರರು ಉಪಸ್ಥಿತರಿದ್ದರು.

## ಅಗಡಿ ಇಂಜನಿಯರಿಂಗ್ ಕಾಲೇಜಿನಲ್ಲಿ 'ಮಿಲಾಂಜೆ-2025' ಸಮ್ಮೇಳನ

# ವಿಶ್ವಾಸದೊಂದಿಗೆ ದೇಶದ ಪ್ರಗತಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪರಿಶ್ರಮದಿಂದ ಯಶಸ್ಸು ಸಾಧ್ಯ. ಈ ನಿಟ್ಟಿನಲ್ಲಿ ಜಗತ್ತಿನಲ್ಲಿನ ಮಾಹಿತಿ ಮತ್ತು ತಂತ್ರಜ್ಞಾನ ಕ್ಷೇತ್ರದ ಸಾಧಕರನ್ನು ಆದರ್ಶವನ್ನಾಗಿಟ್ಟುಕೊಂಡು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಬದಲಾಗುತ್ತಿರುವ ವಿದ್ಯಮಾನಗಳಲ್ಲಿ ಪ್ರಾವೀಣ್ಯತೆ ಮತ್ತು ಕೌಶಲ್ಯತೆಯನ್ನು ಮೆರೆಯಬೇಕು ಎಂದು ಬೆಂಗಳೂರಿನ ರಾಕ್ವೆನ್ ಕಂಪನಿಯ ಮುಖ್ಯ ಇನ್ಫಾರ್ಮೇಶನ್ ಸೆಕ್ಯೂರಿಟಿ ಆಫೀಸರ್ ಪ್ರಸನ್ನಕುಮಾರ ಪಿ.ಕೆ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಶ್ರೀಮತಿ ಕಮಲಾ ಶ್ರೀ ವೆಂಕಪ್ಪ ಎಂ.ಅಗಡಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಜರುಗಿದ ಮಿಲಾಂಜೆ-2025 ತಾಂತ್ರಿಕ ಮತ್ತು ಸಾಂಸ್ಕೃತಿಕ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ಯಶಸ್ಸಿನ ಹಾದಿಯಲ್ಲಿ ವಿಶ್ವಾಸ ಮತ್ತು ಸಕಾರಾತ್ಮಕ ಪ್ರಕ್ರಿಯೆಗಳನ್ನು ರೂಢಿಸಿಕೊಂಡು ತಾಂತ್ರಿಕತೆಯ ವಿಚಾರಗಳನ್ನು ಅಭಿವೃದ್ಧಿಗೊಳಿಸುವ ಮೂಲಕ ಸಮಾಜ ಮತ್ತು ದೇಶದ ಪ್ರಗತಿಗೆ ಮುಂದಾಗಬೇಕು. ಜಗತ್ತು ಮಾಹಿತಿ-ತಂತ್ರಜ್ಞಾನ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆಯನ್ನು ಕಾಣುತ್ತಿದೆ. ಬದಲಾಗುತ್ತಿರುವ ಐಟಿ-ಬಿಟಿಯೊಂದಿಗೆ ವಿದ್ಯಾರ್ಥಿಗಳು ಹೊಂದಿಕೊಂಡು ಸವಾಲುಗಳನ್ನು ಎದುರಿಸುವ ಶಕ್ತಿಯನ್ನು ಬೆಳೆಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ ಮಾತನಾಡಿ, ಇಂದಿನ ತಾಂತ್ರಿಕ



340 ವಿದ್ಯಾರ್ಥಿಗಳು ಪದವಿ ಪೂರೈಸಿರುವ ಹಿನ್ನೆಲೆಯಲ್ಲಿ ಕಾಲೇಜಿನಲ್ಲಿ ಪದವಿ ಪ್ರದಾನ ಸಮಾರಂಭವು ಮೇ. 24ರಂದು ನಡೆಯಲಿದೆ. ಗದಗ ಮಹಾತ್ಮ ಗಾಂಧಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಸುರೇಶ ನಾಡಗೌಡರ ಆಗಮಿಸುವರು. ಹಳೆ ವಿದ್ಯಾರ್ಥಿಗಳ ಪುನರ್ ಮಿಲನ ಕಾರ್ಯಕ್ರಮಕ್ಕೆ ಬಿಫಿನ್ ಜುಗನಿಕರ್ ಅತಿಥಿಗಳಾಗಿ ಆಗಮಿಸಲಿದ್ದು, ಪಾಲಕರು, ಗಣ್ಯರು ಆಗಮಿಸಲಿದ್ದಾರೆ. ಎಂ.ಸಿ. ಬಿಜ್ಜು, ವಿನಯ ಮ್ಯೂಸಿಕ್ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

ಮತ್ತು ಔದ್ಯೋಗಿಕ ಯುಗದಲ್ಲಿ ತಾಂತ್ರಿಕ ವಿದ್ಯಾರ್ಥಿಗಳಿಗೆ ವಿಫುಲ ಅವಕಾಶಗಳಿವೆ. ಜೀವನದಲ್ಲಿ ಅವಕಾಶಗಳನ್ನು ಬಳಸಿಕೊಂಡು ಪರಿಶ್ರಮದಿಂದ, ಶ್ರದ್ಧೆಯಿಂದ ಆಯ್ದುಕೊಂಡ ಕ್ಷೇತ್ರದಲ್ಲಿ ಮುನ್ನಡೆದರೆ ಯಶಸ್ಸು ಕಟ್ಟಿಟ್ಟ ಬುತ್ತಿ. ವಿದ್ಯಾರ್ಥಿಗಳು ಪ್ರಯತ್ನದ ಜೊತೆಗೆ ಹೊಸ ಹೊಸ ಆವಿಷ್ಕಾರಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ವೇದಿಕೆ ಮೇಲೆ ಕಾಲೇಜಿನ ಪ್ರೊ. ವಿಕ್ರಮ ಶಿರೋಳ, ಡಾ. ಗಿರೀಶ ಯತ್ತಿನಹಳ್ಳಿ, ಡಾ. ಅರುಣ ಚೋರಿ, ಪ್ರೊ. ಅಮರಪ್ಪ ಪಾಗಿ, ಪ್ರೊ. ಎಸ್.ಸಿ. ಕೆರಿಮನಿ ಉಪಸ್ಥಿತರಿದ್ದರು. ಶ್ರೀದೇವಿ ಗೌಡರ, ಅಮಿತ ಐರೋಡಗಿ, ಶ್ರೇಯಾ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಅಗಡಿ ಕಾಲೇಜಿನ ಜತೆಗೆ ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ತಾಂತ್ರಿಕ ಶಿಕ್ಷಣದ ವಿದ್ಯಾರ್ಥಿಗಳು ಮಿಲಾಂಜೆ-25ರಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಿದರು.

# ತಂದೆ ಕೊಲೆಗೆ ಚೈತ್ರಾ ಕುಂದಾಪುರ ಸುಪಾರಿ!? ಠಾಣೆ ಮೆಟ್ಟಿಲೇರಿದ ಬಾಲಕೃಷ್ಣ ನಾಯಕ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಗ್ ಬಾಸ್ ಸ್ಪರ್ಧಿ ಚೈತ್ರಾ ಕುಂದಾಪುರ ವಿರುದ್ಧ ತಂದೆ ಬಾಲಕೃಷ್ಣ ನಾಯಕ್ ಕೊಲೆ ಆರೋಪ ಮಾಡಿದ್ದಾರೆ. ಅಲ್ಲದೆ ನನಗೆ ಜೀವ ರಕ್ಷಣೆಗೆ ಕೊಡಿ ಎಂದು ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾರೆ. ಈ ಮೂಲಕ ಚೈತ್ರಾ ಕುಂದಾಪುರ ಹಾಗೂ ಅವರ ತಂದೆ ಬಾಲಕೃಷ್ಣ ನಾಯಕ್ ನಡುವಿನ ಜಗಳ ಬೀದಿಗೆ ಬಂದಿದೆ. ಇಬ್ಬರೂ ಪರಸ್ಪರ ಆರೋಪ-ಪ್ರತ್ಯಾರೋಪ ಮಾಡಿಕೊಳ್ಳುತ್ತಾ ಇದ್ದಾರೆ. ಈಗ ತಂದೆಯೇ ಮಗಳ ವಿರುದ್ಧ ಕೊಲೆ ಬೆದರಿಕೆ ಆರೋಪ ಮಾಡಿದ್ದಾರೆ. ತಂದೆಯನ್ನು ಕೊಲೆಗೈಯ್ಯಲು ಚೈತ್ರಾ ಸುಪಾರಿ ನೀಡಿದರಾ ಎನ್ನುವ ಪ್ರಶ್ನೆ ಇದೀಗ ಮೂಡಿದೆ.

ಈ ಹಿಂದೆ ಚೈತ್ರಾ ಕುಂದಾಪುರ ದುಡ್ಡಿನ ಭೂತ ಎಂಬರ್ಥದಲ್ಲಿ ಬಾಲಕೃಷ್ಣ ಮಾತನಾಡಿದ್ದರು. ಚೈತ್ರಾ ಮಾಡಿದ ಅಕ್ರಮ ವ್ಯವಹಾರಗಳನ್ನು ಬಿಚ್ಚಿಟ್ಟಿದ್ದರು. ಮಗಳು ಬಿಗ್ ಬಾಸ್ ಗೆ ಹೋಗುವ ವಿಚಾರ ಕೂಡ ಗೊತ್ತಿರಲಿಲ್ಲ ಎಂದು ಹೇಳಿದ್ದರು. ಈ ಎಲ್ಲಾ ಬೆಳವಣಿಗೆ ಬೆನ್ನಲ್ಲೇ ಮಾತನಾಡಿದ್ದ ಚೈತ್ರಾ, 'ತಂದೆ ಓರ್ವ ಕುಡುಕ. ಕಷ್ಟದ ಸಮಯದಲ್ಲಿ ಸಹಾಯ ಮಾಡಿಲ್ಲ. ನಮ್ಮನ್ನು ಬೆಳೆಸಲು ಸಹಾಯ ಮಾಡಿಲ್ಲ' ಎಂದು ನೇರ ಆರೋಪ ಮಾಡಿದ್ದರು. ಆ ಬಳಿಕ ಇಬ್ಬರೂ ಪರಸ್ಪರ ಆರೋಪಗಳನ್ನು ಮಾಡಿಕೊಳ್ಳುತ್ತಲೇ ಬರುತ್ತಿದ್ದಾರೆ. ಈಗ ಈ ಪ್ರಕರಣ ಒಂದು ಹಂತ ಮುಂದಕ್ಕೆ ಹೋಗಿದೆ.

ಚೈತ್ರಾ ಅವರು ಗೆಳೆಯರ ಜೊತೆ ಮನೆಗೆ ಬಂದು ದೊಡ್ಡ ಮಟ್ಟದ ದುಡ್ಡಿನ ವ್ಯವಹಾರ ಮಾಡುತ್ತಿದ್ದರು.

ಒಂದು ದಿನ ರಾತ್ರಿ ಕೋಟ್ಯಂತರ ರೂಪಾಯಿ ತಂದು ಎಣಿಸಿದ್ದನ್ನು ಕಂಡು ನಾನು ಭಯಗೊಂಡೆ. ಇದನ್ನು ಪ್ರಶ್ನಿಸಿದ್ದಕ್ಕೆ ನನಗೆ ಅವರು ದಬಾಯಿಸಿದರು. ಹೀಗಾಗಿ, ನಾನು ಮಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಕೆಲಸಕ್ಕೆ ಸೇರಿದೆ.

# ಮನೋರಮಾ ಕಾಲೇಜಿನಲ್ಲಿ ವಿಚಾರ ಸಂಕಿರಣ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಕಾಲೇಜಿನಲ್ಲಿ 'ಮಹಿಳಾ ಪ್ರತಿಭಟನೆಯ ಸಾಂಸ್ಕೃತಿಕ ಚಹರೆ'ಗಳ ಕುರಿತು ವಿಚಾರ ಸಂಕಿರಣ ಏರ್ಪಡಿಸಲಾಗಿತ್ತು. ಬಿಸಿಎ ವಿದ್ಯಾರ್ಥಿನಿ ಸೌಮ್ಯ ಬಣ್ಣದಭಾವಿ ವಿಷಯ ಪ್ರಸ್ತಾಪಿಸಿ, ಆದಿ ಕಾಲದಿಂದ ಮಹಿಳೆಯರಿಗೆ ಅವಕಾಶ ನೀಡದೆ ಶೋಷಣೆ ಮಾಡುತ್ತ ಬಂದಿರುವ ಜನ ಸಮೂಹ ಸ್ವಾತಂತ್ರ್ಯಕ್ಕೆ ಅಡ್ಡಿಯಾಗಿರುವುದು ವಿಪರ್ಯಾಸ. ಪುರಾಣ ಕಾಲದಿಂದ ಹಿಡಿದು ಪ್ರಸ್ತುತ ಕಾಲದವರೆಗೆ ಮಹಿಳೆಯರ ಪ್ರತಿಭಟನೆಯ ಚಹರೆಗಳ ವಿಭಿನ್ನವಾಗಿವೆ ಎಂದು ಪ್ರಬಂಧ ಮಂಡಿಸಿದರು.

ವಿದ್ಯಾರ್ಥಿಗಳು ವಿಚಾರ ಸಂಕಿರಣದಲ್ಲಿ ಮುಕ್ತ ಮನಸ್ಸಿನಿಂದ ಚರ್ಚೆ ನಡೆಸಿದರು. ಕನ್ನಡ ಉಪನ್ಯಾಸಕರಾದ ಸಂಗಮೇಶ ಹಾದಿಮನಿ ವಿದ್ಯಾರ್ಥಿಗಳ ಮಾತುಗಳನ್ನ ಆಲಿಸಿ, ವರ್ಗ ಕೊನೆಯ ವೇದಿಕೆಯನ್ನು ಸರಿಯಾಗಿ ಬಳಸಿಕೊಂಡು ಉತ್ತಮ ವಾಗ್ಮಿಗಳಾಗಿ ಎಂದು ಹರ್ಷವ್ಯಕ್ತಪಡಿಸಿ ಪ್ರೋತ್ಸಾಹಿಸಿದರು.

# ಭೀಕರ ಅಪಘಾತ: ಬ್ಯಾಂಕ್ ಮ್ಯಾನೇಜರ್ ಸಾವು!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಭೀಕರ ಅಪಘಾತದಲ್ಲಿ ಬ್ಯಾಂಕ್ ಮ್ಯಾನೇಜರ್ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಇಲ್ಲಿನ ತೇಗೂರು ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಜರುಗಿದೆ.

ರಾಹುಲ್ ಶುಕ್ಲಾ (40) ಮೃತ ದುರ್ದೈವಿ. ಇವರು ಮಧ್ಯಪ್ರದೇಶ ಮೂಲದವರಾಗಿದ್ದು, ಬೆಳಗಾವಿ ಕೆನರಾ ಬ್ಯಾಂಕ್‌ನಲ್ಲಿ ಮ್ಯಾನೇಜರ್ ಆಗಿದ್ದರು ಎನ್ನಲಾಗಿದೆ.

ಧಾರವಾಡ ಕಡೆಯಿಂದ ವಾಪಸ್ ಬೆಳಗಾವಿ ಕಡೆಗೆ ತೆರಳುತ್ತಿದ್ದ ಸಂದರ್ಭದಲ್ಲಿ ಎದುರಿಗೆ ಹೋಗುತ್ತಿದ್ದ ಲಾರಿಗೆ ಕಾರು ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ಕಾರಿನಲ್ಲಿದ್ದ ರಾಹುಲ್ ಶುಕ್ಲಾ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಪತ್ನಿ ಶ್ರೇಯಾ ಶುಕ್ಲಾ (35) ಹಾಗೂ ಮೂರು ವರ್ಷದ ಮಗಳು ಕಿಯಾನಾ ತೀವ್ರವಾಗಿ ಗಾಯಗೊಂಡಿದ್ದು, ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತ ಸಂಭವಿಸುತ್ತಿದ್ದಂತೆ ಲಾರಿ ನಿಲ್ಲಿಸದ ಚಾಲಕ ವಾಹನ ಸಮೇತ ಸ್ಥಳದಿಂದ ಪರಾರಿಯಾಗಿದ್ದಾನೆ. ಗರಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನಿಧನ

**ವೀರಣ್ಣ ಈಶ್ವರಪ್ಪ ಬಂಕಾಪೂರ**



**ಲಕ್ಕುಂಡಿ:** ಇಲ್ಲಿಯ ಹಿರೇಹಾಳ ಓಣಿ ನಿವಾಸಿ ವೀರಣ್ಣ ಈಶ್ವರಪ್ಪ ಬಂಕಾಪೂರ (54) ಶುಕ್ರವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಶನಿವಾರ ಮುಂಜಾನೆ 11ಕ್ಕೆ ಸ್ವಗ್ರಾಮದಲ್ಲಿ ನೆರವೇರಲಿದೆ.

# ಸಚಿವ ಎಚ್.ಕೆ. ಪಾಟೀಲರಿಂದ ಉದ್ಯೋಗ ಕ್ರಾಂತಿ

■ವಿಜಯಸಾಕ್ಷಿ ಸುದ್ದಿ, ಗದಗ



ಪ್ರವಾಸೋದ್ಯಮ ಇಲಾಖೆಯಿಂದ ಗದಗ ಜಿಲ್ಲೆಗೆ ಒಂದು ವರ್ಷದಲ್ಲಿ 200 ಟ್ಯಾಕ್ಸಿ ವಾಹನಗಳನ್ನು ಸಚಿವ ಎಚ್.ಕೆ. ಪಾಟೀಲರು ನೀಡಿ ಜಿಲ್ಲೆಯ ಹಲವಾರು ನಿರುದ್ಯೋಗ ಯುವಕರಿಗೆ ಉದ್ಯೋಗವನ್ನು ನೀಡಿ ಜಿಲ್ಲೆಯಲ್ಲಿ ಹೊಸ ಕ್ರಾಂತಿಯನ್ನೇ ಸೃಷ್ಟಿಸಿದ್ದಾರೆ ಎಂದು ಕಾಂಗ್ರೆಸ್ ಯುವ ಮುಖಂಡ ಸೈಯದ್ ಖಾಲಿದ್ ಕೊಪ್ಪಳ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕೇಂದ್ರ ಸರ್ಕಾರ ಜನರಿಗೆ ಸುಳ್ಳು ಉದ್ಯೋಗ ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬಂದು ಯುವಕರಿಗೆ ಮೋಸ ಮಾಡಿದೆ. ಆದರೆ ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಬಡವರಿಗೆ, ನಿರುದ್ಯೋಗಿಗಳಿಗೆ ಹಲವಾರು ಯೋಜನೆಗಳನ್ನು ಕಾಂಗ್ರೆಸ್ ಸರ್ಕಾರ ನೀಡಿದೆ.

ಸಚಿವರಾದ ಎಚ್.ಕೆ. ಪಾಟೀಲರು ಜಿಲ್ಲೆಯಲ್ಲಿ ಹಲವಾರು ಯುವಕರಿಗೆ ಉದ್ಯೋಗ ನೀಡಲು ಉದ್ಯೋಗ ಮೇಳ ಹಾಗೂ ನಿರುದ್ಯೋಗಿ ಯುವಕರಿಗೆ ಟ್ಯಾಕ್ಸಿ ವಿತರಣೆ ಸೇರಿದಂತೆ ಹಲವಾರು ಯೋಜನೆಗಳನ್ನು ಸಮರ್ಪಕವಾಗಿ ನೀಡಿದ್ದಾರೆ ಎಂದಿದ್ದಾರೆ.

### ಧ.ಗ್ರಾ. ಯೋಜನೆಯ ಅನುದಾನದಲ್ಲಿ ಪುನಶ್ಚೇತನಗೊಂಡ ಬಸಾಪುರ ಕೆರೆ ಹಸ್ತಾಂತರ

# ಕೆರೆಗಳ ನಿರ್ಮಾಣ, ಅಭಿವೃದ್ಧಿ ಪುಣ್ಯದ ಕಾರ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೆರೆ-ಕಟ್ಟೆ-ಬಾವಿಗಳು ಭೂಮಿಯ ಮೇಲಿನ ಜೀವ ಸಂಕುಲದ ಮೂಲ ಸೆಲೆಗಳಾಗಿವೆ. ಕೆರೆಗಳ ನಿರ್ಮಾಣ, ಅಭಿವೃದ್ಧಿಪಡಿಸುವುದು ಶ್ರೇಷ್ಠ ಮತ್ತು ಪುಣ್ಯದ ಕೆಲಸವಾಗಿದೆ ಎಂದು ಮುಕ್ತಿಮಂದಿರ ಧರ್ಮ ಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲ ರೇಣುಕ ವೀರ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ತಾಲೂಕಿನ ಬಸಾಪುರ ಗ್ರಾಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ 'ನಮ್ಮ ಊರು- ನಮ್ಮ ಕೆರೆ' ಕಾರ್ಯಕ್ರಮದ ಅನುದಾನದಡಿ ಪುನಶ್ಚೇತನಗೊಳಿಸಲಾದ ಬಸಾಪುರ ಕೆರೆ ಹಸ್ತಾಂತರ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡುತ್ತಿದ್ದರು. 'ಕೆರೆಯಂ ಕಟ್ಟಿಸು, ಬಾವಿಯಂ ಸವಿಸು, ದೇವಾಗಾರಂ ಮಾಡಿಸು' ಎಂದು ವಿಜಯನಗರ ಅರಸರ ಕಾಲದ ಕನ್ನಡದ ಶಾಸನದಲ್ಲಿ



ಉಲ್ಲೇಖವಾಗಿರುವುದು ಕೆರೆಯ ಮಹತ್ವವನ್ನು ಸಾಕ್ಷೀಕರಿಸುತ್ತದೆ. ಆಧುನಿಕತೆಯ, ಅಧುನಿಕ ತಂತ್ರಜ್ಞಾನ ಮತ್ತು ವಿಜ್ಞಾನದ ಸುಳಿಗೆ ಸಿಲುಕಿ ಕೆರೆಗಳು ತಮ್ಮ ಮೂಲ ಸ್ವರೂಪ ಕಳೆದುಕೊಂಡಿವೆ. ಅಂತರ್ಜಲ ಮಟ್ಟ ಪಾತಾಳ ಕಂಡಿರುವುದು ಭವಿಷ್ಯದ ಕರಾಳತೆಗೆ ಸಾಕ್ಷಿಯಾಗಿ ನಿಂತಿವೆ. ಇಂತಹ ಸಂದರ್ಭದಲ್ಲಿ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವಿರೇಂದ್ರ ಹೆಗ್ಗಡೆಯವರು ಜಲ ಮೂಲ ಸಂರಕ್ಷಣೆಯ ಆಂದೋಲದ ಮೂಲಕ ಶಾಶ್ವತ ನೀರಿನ ವ್ಯವಸ್ಥೆಯನ್ನೇ ಮಾಡುವ ಭಗೀರಥ ಕಾರ್ಯ ಅತ್ಯಂತ ಶ್ಲಾಘನೀಯ. ನೀರನ್ನು ಪರಮಪವಿತ್ರ ಗಂಗಾಮಾತೆಯಂತೆ ಪೂಜಿಸುವ ಸಂಪ್ರದಾಯ ಎಲ್ಲರಲ್ಲೂ ಮೈಗೂಡಬೇಕು ಎಂದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಪ್ರಾದೇಶಿಕ ನಿರ್ದೇಶಕ ಜೆ ಚಂದ್ರಶೇಖರ ಮತ್ತು ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ ಕೆರೆ ಅಭಿವೃದ್ಧಿಪಡಿಸಿದ ಹಸ್ತಾಂತರ ಪತ್ರವನ್ನು ಗ್ರಾಮಸ್ಥರಿಗೆ ವಿತರಿಸಿ ಮಾತನಾಡಿ, ಬಸಾಪುರ ಗ್ರಾಮದ 8 ಎಕರೆ 3 ಗುಂಟೆ ವಿಸ್ತೀರ್ಣದ ಸುಮಾರು 700 ವರ್ಷದ ಇತಿಹಾಸವಿರುವ ಕೆರೆಯನ್ನು ಸುಮಾರು 8 ಲಕ್ಷ 10 ಸಾವಿರ ರೂ ವೆಚ್ಚದ ಅನುದಾನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ಅಭಿವೃದ್ಧಿಪಡಿಸಲಾಗಿದೆ. ಯೋಜನೆಯಿಂದ ಅಭಿವೃದ್ಧಿಪಡಿಸಲಾದ ಒಟ್ಟು ಕೆರೆಗಳಲ್ಲಿ ಇದು 835ನೇ ಕೆರೆಯಾಗಿದೆ. ಬಸಾಪುರ ಗ್ರಾಮದ ಜನರು ಕೆರೆಯನ್ನು ಸುಂದರವಾಗಿ, ಪಾವಿತ್ರ್ಯತೆಯಿಂದ ಕಾಪಾಡಿಕೊಳ್ಳಬೇಕು ಎಂದರು.


ಈ ವೇಳೆ ಶಿರಹಟ್ಟಿ-ಲಕ್ಷ್ಮೇಶ್ವರ ಯೋಜನಾಧಿಕಾರಿ ಪುನೀತ್ ಓಲೇಕಾರ್, ವಲಯ ಮೇಲ್ವಿಚಾರಕಿ ಶೃತಿ, ತಾಲೂಕಿನ ಕೃಷಿ ಅಧಿಕಾರಿ ಭೀಮಪ್ಪ, ವಲಯದ ಸೇವಾ ಪ್ರತಿನಿಧಿಗಳು, ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಕೆರೆಯ ಅಭಿವೃದ್ಧಿ ಸಮಿತಿಯ ಮುಖಂಡರು, ಗ್ರಾಮದ ಸಮಸ್ತ ಗುರು ಹಿರಿಯರು, ಮಹಿಳೆಯರು ಭಾಗವಹಿಸಿದ್ದರು.

> ಕಾರ್ಯಕ್ರಮವನ್ನು ಉದ್ಘಾಟಿಸಿದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮತ್ತು ಗಂಗಣ್ಣ ಮಹಾಂತಶೆಟ್ಟರ ಮಾತನಾಡಿ, ಸರ್ಕಾರಗಳು ಮಾಡಲೇಬೇಕಾದ ಜಲಮೂಲಗಳ ಸಂರಕ್ಷಣೆಯ ಕಾರ್ಯವನ್ನು ಧರ್ಮಸ್ಥಳದ ಧರ್ಮಾಧಿಕಾರಿ ಡಾ.ವಿರೇಂದ್ರ ಹೆಗ್ಗಡೆಯವರು ಕಾಯಾವಾಚಾಮನಸಾ ಪೂರ್ವಕವಾಗಿ ಮಾಡುತ್ತಿರುವುದಕ್ಕೆ ನಾಡಿನ ಜನತೆ ಅವರಿಗೆ ಋಣಿಯಾಗಿರುತ್ತೇವೆ. ಶ್ರೀ ಕ್ಷೇತ್ರ ಧರ್ಮಸ್ಥಳ ಸಂಘ ಎಲ್ಲ ಬಡಜನರ ಸೇವೆಗಾಗಿ ಕಂಕಣಬದ್ಧವಾಗಿದೆ. ಜನರು ಇದರ ಸದುಪಯೋಗ ಪಡೆದುಕೊಂಡು ಉತ್ತಮ ಬದುಕನ್ನು ಕಟ್ಟಿಕೊಳ್ಳಬೇಕು ಎಂದರು.

# ರಸ್ತೆ ವಿಭಜಕ ಅಳವಡಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಗದಗ ಅಗಸಿಯಿಂದ ಶಿಗ್ಲಿ ನಾಕಾದವರೆಗೆ 2 ವರ್ಷಗಳ ಹಿಂದೆಯೇ ಹದಗೆಟ್ಟ ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯನ್ನು ಸಿ.ಸಿ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಿದ ಸಂದರ್ಭದಲ್ಲಿ ರಸ್ತೆ ವಿಭಜಕಗಳನ್ನು (ಡಿವೈಡರ್) ಅಳವಡಿಸಬೇಕಾಗಿತ್ತು. ಆದರೆ ಕಾಮಗಾರಿ ಮಾಡದೇ ಕೈ ತೊಳೆದುಕೊಂಡ ಗುತ್ತಿಗೆದಾರರಿಂದ ಕೂಡಲೇ ಡಿವೈಡ್‌ರ ಕಾಮಗಾರಿ ಮಾಡಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ಶರಣು ಗೋಡಿ ನೇತೃತ್ವದಲ್ಲಿ ಶುಕ್ರವಾರ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.




ಪಟ್ಟಣದ ಬಸ್ ಸ್ಟಾಂಡ್ ಹತ್ತಿರ ರಾಜ್ಯ ಹೆದ್ದಾರಿಯಲ್ಲಿ ಕೆಲಕಾಲ ಪ್ರತಿಭಟನೆ ನಡೆಸಿದ ಕರವೇ ಮುಖಂಡರು ಮಾತನಾಡಿ, 2 ವರ್ಷಗಳ ಹಿಂದೆಯೇ ಪಿಡಬ್ಲೂಡಿಯಿಂದ ಕೈಗೊಂಡ ರಸ್ತೆ ಅಭಿವೃದ್ಧಿ ಕಾಮಗಾರಿ ಸಂದರ್ಭದಲ್ಲಿ ಕ್ರಿಯಾಯೋಜನೆಯಂತೆ ಡಿವೈಡರ್ ಅಳವಡಿಸಬೇಕಾಗಿತ್ತು. 2 ವರ್ಷಗಳಿಂದ ಈ ರಸ್ತೆಯಲ್ಲಿ ಡಿವೈಡರ್ ಇಲ್ಲದ್ದರಿಂದ ಸಾಕಷ್ಟು ಸಮಸ್ಯೆಯಾಗುತ್ತಿದೆ. ವಾಹನ ಸವಾರರು ಅಡ್ಡಾದಿಡ್ಡಿ, ನಿಯಮ ಮೀರಿ ಸಂಚರಿಸಲು ಅವಕಾಶ ಮಾಡಿಕೊಟ್ಟಂತಾಗಿದೆ. ನಿತ್ಯ ಸಾಕಷ್ಟು ಅವಘಡ, ಕಿರಿಕಿರಿ ಉಂಟಾಗುತ್ತಿದೆ. ಗುತ್ತಿಗೆದಾರರಿಂದ ಕಾಮಗಾರಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಪಿಡಬ್ಲೂಡಿ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಈ ವೇಳೆ ಜಿಲ್ಲಾ ಕಾರ್ಯಾಧ್ಯಕ್ಷ ಇಸ್ಮಾಯಿಲ್ ಆಡೂರ, ತಾಲೂಕಾಧ್ಯಕ್ಷ ನಾಗೇಶ ಅಮರಾಪುರ, ಉಪಾಧ್ಯಕ್ಷ ಶರಣಪ್ಪ ಬಸಾಪುರ, ಕಾರ್ಯದರ್ಶಿ ಕೈಸರ ಮಹಮ್ಮದಅಲಿ, ಖಾನಸಾಬ್ ಮನಿಯಾರ, ಗೌಸ ಮಂಜಲಾಪುರ, ಬಸವರಾಜ ಅಮರಾಪುರ, ದುದ್ದು ತೋಟದ, ಗೌಸ ಹುಲುಗೂರ, ಮಹಮ್ಮದ್‌ಅಲಿ ಶಿಗ್ಗಾಂವ, ಮಾಂತೇಶ ಉಮಚಗಿ, ರಫೀಕ್ ಗುಡ್ಡದ, ಆಶಿಪ್ ದೊಡ್ಮನಿ, ಸಂಜೀವ ಅಮರಾಪುರ, ಚಂದ್ರಕಾಂತ ರೊಟ್ಟಿಗವಾಡ, ಲೆಂಕೆಪ್ಪ ಶೆರಸೂರಿ ಸುಲೇಮಾನ ಬಾರಿಗಿಡದ, ಹಜರತ್‌ಅಲಿ ಮನಿಯಾರ್, ಮಲ್ಲಿಕ್ ಗುಡ್ಡದ, ಇಮ್ರಾನ್ ದರೆಬಾನ, ಮಲ್ಲಿಕ್ ಗದವಾಲ, ನವಾಜ್‌ಅತ್ತಾರ ಹುಬ್ಬಳ್ಳಿ, ವೆಂಕಪ್ಪ ಲಮಾಣಿ, ಶರಣಪ್ಪ ಕಳ್ಳಿಹಾಳ, ಪೀರ್‌ಸಾಬ್ ರಿತ್ತಿ ಮುಂತಾದವರಿದ್ದರು. ಲೋಕೋಪಯೋಗಿ ಇಲಾಖೆಯ ಕಿರಿಯ ಅಭಿಯಂತರರ ಮಲ್ಲಿಕಾರ್ಜುನ ಮೈತ್ರಿ ಮನವಿ ಸ್ವೀಕರಿಸಿದರು.

# ಬಾನು ಮುಷ್ತಾಕರಿಗೆ ತೋಂಟದ ಶ್ರೀ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡದ ಶ್ರೇಷ್ಠ ಲೇಖಕಿ ಮತ್ತು ಕಥೆಗಾರ್ತಿ ಬಾನು ಮುಷ್ತಾಕ ಅವರ 'ಹೃದಯ ಹಣತೆ' (ಹಾರ್ಟ್ ಲ್ಯಾಂಪ್) ಕಥಾಸಂಕಲನಕ್ಕೆ ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ಲಭಿಸಿರುವುದು ಸಮಸ್ತ ಕನ್ನಡಿಗರೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಜಾಗತಿಕ ಮಟ್ಟದಲ್ಲಿ ಕನ್ನಡದ ಘನತೆ ಹಾಗೂ ಗೌರವಗಳನ್ನು ಹೆಚ್ಚಿಸಿದ ಅವರು ನಿಜಕ್ಕೂ ಅಭಿನಂದನಾರ್ಹರು ಎಂದು ಡಂಬಳ-ಗದಗ ಜಗದ್ಗುರು ತೆ-ೂಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಕಥೆಗಾರ್ತಿ ಬಾನು ಮುಷ್ತಾಕ ಅವರಿಗೆ



ಶುಭಾಶಯ ಕೋರಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಶ್ರೀಗಳು, ಲೇಖಕಿ ಬಾನು ಮುಷ್ತಾಕ ಅವರು ನಮ್ಮ ನಾಡಿನ ಹೆಸರಾಂತ ಪ್ರಗತಿಪರ ಚಿಂತಕಿಂ-ುಾಗಿದ್ದಾರೆ. ಪ್ರಸಿದ್ಧ ವಾರಪತ್ರಿಕೆಯ ವರದಿಗಾರ್ತಿಂಯಾಗಿಂಯೂ ಸೇವೆ ಸಲ್ಲಿಸಿದ್ದಾರೆ. ನ್ಯಾಂಯುವಾದಿಂಯಾಗಿಂಯೂ ಕಾರ್ಯನಿರ್ವಹಿಸಿದ ಅವರು, ಹತ್ತು ಹಲವು ಮೌಲಿಕ ಕೃತಿಗಳನ್ನು ರಚಿಸುವ ಮೂಲಕ ಕನ್ನಡ ಸಾಹಿತ್ಯಕ್ಕೆ ಅಪೂರ್ವ ಕೊಡುಗೆಯನ್ನು ನೀಡಿದ್ದಾರೆ. ಈ ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿಯು ಕನ್ನಡದ ಕೃತಿಗೆ ಸಂದ ಮೊದಲ ಪ್ರಶಸ್ತಿಯಾಗಿರುವುದರಿಂದ ಕನ್ನಡಿಗರಲ್ಲಿ ವಿಶೇಷ ಸಂಭ್ರಮ ಉಂಟಾಗಿದೆ. ಕರ್ನಾಟಕಕ್ಕೆ ಈ ಗೌರವ ತಂದುಕೊಟ್ಟ ಕನ್ನಡತಿ ಬಾನು ಮುಷ್ತಾಕ ಹಾಗೂ ಕೃತಿಯನ್ನು ಇಂಗ್ಲೀಷಿಗೆ ಅನುವಾದಿಸಿದ ದೀಪಾ ಭಾಸ್ತಿ ಅವರನ್ನು ಶ್ರೀಗಳು ಅಭಿನಂದಿಸಿದ್ದಾರೆ.



**ಗದಗ:** ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆ ಜರುಗಿ-ತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ.ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ತಾರಾಮಣಿ ಜಿ.ಎಚ್, ತಹಸೀಲ್ದಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಖ್ಯಾತ ವೈದ್ಯ ಡಾ. ಟಿ.ಎಂ. ಮಹೇಂದ್ರಕರ ಇನ್ನಿಲ್ಲ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಳ ಸಜ್ಜನಿಕೆಗೆ ಮತ್ತು ಸಾರ್ವಜನಿಕ ವಲಯದಲ್ಲಿ ಅತ್ಯಂತ ಪ್ರೀತಿ ಪಾತ್ರರಾಗಿದ್ದ ಶಿರಹಟ್ಟಿಯ ಹಿರಿಯ ವೈದ್ಯ ಡಾ. ಟಿ.ಎಂ. ಮಹೇಂದ್ರಕರ (70) ಗುರುವಾರ ತಡರಾತ್ರಿ ಹೃದಯಾಘಾತದಿಂದ ನಿಧನರಾದರು.

ಜಿಲ್ಲಾ ಭಾವಸಾರ ಕ್ಷತ್ರೀಯ ಸಮಾಜದ ಅಧ್ಯಕ್ಷರಾಗಿಯೂ ಡಾ. ಟಿ.ಎಂ. ಮಹೇಂದ್ರಕರ ಸೇವೆ ಸಲ್ಲಿಸುತ್ತಿದ್ದರು. ಪಟ್ಟಣದ ಎಲ್ಲ ಸಮುದಾಯದವರೊಂದಿಗೂ ಅವಿನಾಭಾವ ಸಂಬಂಧವನ್ನು ಹೊಂದಿ ಪಟ್ಟಣದ ಬಹುತೇಕ ಎಲ್ಲ ಉತ್ಸವ-ಕಾರ್ಯಗಳಲ್ಲಿ ಭಾಗಿಯಾಗುತ್ತಿದ್ದರು. ಸುಮಾರು



5 ದಶಕಗಳ ಕಾಲ ಮನೆ ಮನೆಗೆ ಹೋಗಿ ರೋಗಿಗಳ ತಪಾಸಣೆ ನಡೆಸಿ ಅವರಿಗೆ ಚಿಕಿತ್ಸೆಯನ್ನು ನೀಡಿದ್ದರು. ಅನೇಕರಿಗೆ ಧನಸಹಾಯ, ಸಾಮಾಜಿಕ ಕಾರ್ಯಗಳಗೂ ಸಹಾಯಹಸ್ತ ನೀಡುತ್ತಿದ್ದರು. ಮೃತರಿಗೆ ಪತ್ನಿ ಮತ್ತು ಇಬ್ಬರು ಪುತ್ರರು ಇದ್ದಾರೆ.

ಮೃತರ ಅಂತ್ಯಕ್ರಿಯೆಯು ಅಪಾರ ಬಂಧು-ಬಳಗದ ಶೋಕದ ನಡುವೆ ಶುಕ್ರವಾರ ಮಧ್ಯಾಹ್ನ 2ರ ಸುಮಾರಿಗೆ ಶಿರಹಟ್ಟಿಯ ರುದ್ರಭೂಮಿಯಲ್ಲಿ ನೆರವೇರಿತು.

**ಸಂತಾಪ:** ಡಾ. ಟಿ.ಎಂ. ಮಹೇಂದ್ರಕರರ ಅಗಲಿಕೆಗೆ ಶಿರಹಟ್ಟಿಯ ಜ.ಫ. ಸಿದ್ದರಾಮ ಸ್ವಾಮೀಜಿ, ಜ.ಫ. ದಿಂಗಾಲೇಶ್ವರ ಸ್ವಾಮೀಜಿ, ವಿಶ್ವನಾಥ ಕಪ್ಪತ್ತನವರ, ಸಂದೀಪ ಕಪ್ಪತ್ತನವರ, ಅಜ್ಜು ಪಾಟೀಲ, ನಾಗರಾಜ ಲಕ್ಕುಂಡಿ, ಸಂತೋಷ ಕುರಿ, ಯಲ್ಲಪ್ಪ ಇಂಗಳಗಿ, ಅಕ್ಬರಸಾಬ ಯಾದಗಿರಿ, ಮಂಜುನಾಥ ಘಂಟಿ ಮುಂತಾದವರು ಸಂತಾಪ ಸೂಚಿಸಿದ್ದಾರೆ.

# ಡಾ. ಪದ್ಮಾರಿಗೆ 'ಸಾಹಿತ್ಯ ನವಚೇತನ' ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಬಳ್ಳಾರಿ ಜಿಲ್ಲೆ, ಸಂಡೂರು ತಾಲೂಕಿನ ತಾಳೂರು ಗ್ರಾಮದ ನಕ್ಷತ್ರ ಸಾಹಿತ್ಯ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ರಾಷ್ಟ್ರಮಟ್ಟದ ನಕ್ಷತ್ರಗಳ ಸಂಭ್ರಮ ಕಾರ್ಯಕ್ರಮವನ್ನು ಮೇ. 25ರಂದು ವಿಶ್ವರತ್ನತ್ರಯರ ವೇದಿಕೆ ತಾಳೂರು ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಗದುಗಿನ ಕಲಾವಿದೆ ಡಾ. ಪದ್ಮಾ ಜೆ.ಕಬಾಡಿ ಅವರು ಸಾಹಿತ್ಯ, ಸಂಗೀತ ಕ್ಷೇತ್ರದಲ್ಲಿ ಮಾಡುತ್ತಿರುವ ಸೇವೆಯನ್ನು ಗುರುತಿಸಿ ಅವರಿಗೆ 'ಸಾಹಿತ್ಯ ನವಚೇತನ ರಾಷ್ಟ್ರ ಪ್ರಶಸ್ತಿ' ನೀಡಿ ಗೌರವಿಸಲಾಗುವುದು ಎಂದು ವಕೀಲರು ಹಾಗೂ ಸಂಸ್ಥಾಪಕ ಅಧ್ಯಕ್ಷರಾದ ಡಾ. ಷಣ್ಮುಖ ಸ್ವಾಮಿ ಕಡ್ಡಿಪುಡಿ ಅವರು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಬೆಂಗಳೂರಿನಲ್ಲಿ ಒಂಬತ್ತು ತಿಂಗಳ ಮಗುವಿಗೆ ಕೋವಿಡ್-19 ಧೃಡ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನಲ್ಲಿ ಒಂಬತ್ತು ತಿಂಗಳ ಮಗುವಿಗೆ ಕೋವಿಡ್ -19 ಪಾಸಿಟಿವ್ ದೃಢಪಟ್ಟಿದೆ ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯ ಮೂಲದ ಈ ಶಿಶುವನ್ನು ಮೊದಲು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು, ನಂತರ ನಗರದ ವಾಣಿ ವಿಲಾಸ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು.

ಮೇ 22 ರಂದು ರಾಪಿಡ್ ಆಂಟಿಜೆನ್ ಪರೀಕ್ಷೆಯ ಮೂಲಕ ಮಗುವಿಗೆ ಕೋವಿಡ್ ದೃಢಪಟ್ಟಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತಾ ಹೇಳಿದ್ದಾರೆ. "ಮಗು ಸ್ಥಿರವಾಗಿದೆ, ಪ್ರಸ್ತುತ ಬೆಂಗಳೂರಿನ ಕಲಾಸಿಪಾಳ್ಯದ ವಾಣಿ ವಿಲಾಸ ಆಸ್ಪತ್ರೆಗೆ ದಾಖಲಿಸಲಾಗಿದೆ" ಎಂದು ಅವರು ಹೇಳಿದರು.

ಮಗು ವೈದ್ಯಕೀಯ ನಿಗಾದಲ್ಲಿದೆ, ಚಿಕಿತ್ಸೆಗೆ ಸ್ಪಂದಿಸುತ್ತಿದೆ ಎಂದು ಆರೋಗ್ಯ ಇಲಾಖೆಯ ಮೂಲಗಳು ದೃಢಪಡಿಸಿವೆ.

### ಸಿದ್ಧಲಿಂಗ ನಗರ ಪ್ರೌಢಶಾಲೆಯಂತೆ ಇತರೆ ಶಾಲೆಗಳು ಅಭಿವೃದ್ಧಿ ಹೊಂದಲಿ: ಭರತ್ ಎಸ್

# ಹೊರಟ್ಟಿ ದಂಪತಿಗಳ ಸಹಕಾರ ಸಾರ್ಥಕವಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ಸಿದ್ಧಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯನ್ನು ದತ್ತುಪಡೆದು ಸಾಕಷ್ಟು ಸಹಾಯ ಸಹಕಾರವನ್ನು ನೀಡುವ ಮೂಲಕ ಜಿಲ್ಲೆಯಲ್ಲಿಯೇ ಒಂದು ಮಾದರಿ ಶಾಲೆಯಾಗಿ ಬೆಳೆದು ನಿಲ್ಲುವಲ್ಲಿ ಶ್ರಮಿಸಿದ್ದಾರೆ. ಹೀಗಾಗಿ ಇವರು ನೀಡಿದ ಸಹಕಾರ ಪ್ರೋತ್ಸಾಹ ಸಾರ್ಥಕವಾಗಿದೆ ಎಂದು ಗದಗ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಹೇಳಿದರು.

ಅವರು ಸಿದ್ಧಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಸಾರ್ವಜನಿಕ ಶಿಕ್ಷಣ ಇಲಾಖೆಯ ಮಹಾತ್ವಾಂಕಾಕ್ಷಿ ಯೋಜನೆಯಾದ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಂದರ್ಭದಲ್ಲಿ ಸಿದ್ಧಲಿಂಗ ನಗರದ ಪ್ರೌಢಶಾಲೆಯ ಕಿರು ಪರಿಚಯವುಳ್ಳ



ಕರಪತ್ರವನ್ನು ಬಿಡುಗಡೆ ಮಾಡಿ ಮಾತನಾಡಿದರು.

ಏನೂ ಇಲ್ಲದ ಈ ಶಾಲೆಯಲ್ಲಿ ಎಲ್ಲವೂ ಸಿಗುವಂತೆ ಬಸವರಾಜ ಹೊರಟ್ಟಿ ದಂಪತಿಗಳು ಹಾಗೂ ಇನ್ನಿತರ ದಾನಿಗಳು, ಜನಪ್ರತಿನಿಧಿಗಳು ಕೇವಲ ಎರಡು ವರ್ಷಗಳಲ್ಲಿ ಮಾಡಿದ್ದು ಹೆಮ್ಮೆಯ ಸಂಗತಿ. ಈ ಶಾಲೆ ಇಂದು ಜಿಲ್ಲೆಯಲ್ಲಿಯೇ ಒಂದು ಮಾದರಿ ಶಾಲೆಯಾಗಿ ಬೆಳೆದು ನಿಂತಿದೆ. ಎಲ್ಲ ಮೂಲಭೂತ ಸೌಕರ್ಯಗಳನ್ನು ಹೊಂದಿದೆ. ಇನ್ನು ಮುಂದೆ ಜಿಲ್ಲೆಯಲ್ಲಿಯೇ ಪ್ರತಿವರ್ಷ ಉತ್ತಮ ಫಲಿತಾಂಶ ನೀಡುವ ಶಾಲೆಯಾದಾಗ ಮಾತ್ರ ಬಸವರಾಜ ಹೊರಟ್ಟಿಯವರ ಹಾಗೂ ಇನ್ನಿತರರು ನೀಡಿದ ಸಹಾಯ, ಸಹಕಾರ ಸಾರ್ಥಕವಾಗುತ್ತದೆ. ಆ ನಿಟ್ಟಿನತ್ತ ಸಾ.ಶಿ ಇಲಾಖೆ, ಶಾಲಾ ಸಿಬ್ಬಂದಿ, ಎಸ್.ಡಿ.ಎಂ.ಸಿ ಪದಾಧಿಕಾರಿಗಳು ಗಮನ ಹರಿಸುವುದು ಅತ್ಯವಶ್ಯವಿದೆ ಎಂದರು.

ಈ ಸಂದರ್ಭದಲ್ಲಿ ಡಿ.ಡಿ.ಪಿ.ಐ ಆರ್.ಎಸ್. ಬುರಡಿ, ಡಾ. ಬಸವರಾಜ ಧಾರವಾಡ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವ್ಹಿ. ಶೆಟ್ಟೆಪ್ಪನವರ, ನಗರಸಭೆ ಸದಸ್ಯೆ ವಿದ್ಯಾ ಗಡಗಿ, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ನಂದಾ ಖಟವಟೆ, ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳಾದ ಸರಸ್ವತಿ ಕನವಳ್ಳಿ, ರವಿಪ್ರಕಾಶ, ಎಂ.ಎಸ್. ಕಂಬಳಿ, ಶಿವಕುಮಾರ ಕುರಿ, ಅರವಟಗಿ, ಶಂಕರ ಹಡಗಲಿ, ಎಸ್.ಡಿ. ಪ್ರಭಯ್ಯನಮಠ, ಜೆ.ಬಿ. ಅಣ್ಣಿಗೇರಿ, ಬಿ.ಎಸ್. ಯರಗುಡಿ ಮುಂತಾದವರು ಉಪಸ್ಥಿತರಿದ್ದರು.

> ಯಾವ ಖಾಸಗಿ ಶಾಲೆಗಳಿಗಿಂತಲೂ ಕಡಿಮೆ ಇರದಂತೆ ಈ ಶಾಲೆ ತನ್ನ ಕಳೆಯನ್ನು ಹೆಚ್ಚಿಸಿಕೊಂಡಿದೆ. ವಿಶೇಷವಾಗಿ ದತ್ತು ಉಸ್ತುವಾರಿ ವಹಿಸಿದ ಡಾ. ಬಸವರಾಜ ಧಾರವಾಡ ಅವರು ಹೆಚ್ಚು ಆಸಕ್ತಿ ವಹಿಸಿ ಶಾಲೆಗೆ ಎಲ್ಲ ಮೂಲಭೂತ ಸೌಕರ್ಯ ದೊರೆಯುವಂತೆ ಎಲ್ಲರ ಸಹಕಾರ ಪಡೆದು ಮಾಡಿದ್ದಾರೆ. ಅವರ ಶ್ರಮವು ಸಾರ್ಥಕವಾಗಬೇಕಾದರೆ ಈ ಶಾಲೆ ಉತ್ತಮ ಫಲಿತಾಂಶ ನೀಡುವ ಮೂಲಕ ಒಂದು ಪ್ರತಿಷ್ಠಿತ ಶಾಲೆಯಾಗಿ ಸಾರ್ವಜನಿಕ ವಲಯದಲ್ಲಿ ಗುರುತಿಸಿಕೊಳ್ಳಬೇಕು. ಅಂದಾಗ ಸಹಾಯ ಸಹಕಾರ ನೀಡಿದ ಎಲ್ಲರಿಗೂ ಗೌರವ ಲಭಿಸುತ್ತದೆ. ಇದರ ಸದುಪಯೋಗವನ್ನು ಪಾಲಕರು, ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ಭರತ್ ಎಸ್ ಕೋರಿದರು.

# ಅಪಾಯಕ್ಕೆ ಆಹ್ವಾನ ನೀಡುತ್ತಿರುವ ಗುಂಡಿಗಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಹುತೇಕ ರಸ್ತೆಗಳಲ್ಲಿ ತಗ್ಗು-ಗುಂಡಿಗಳು ತುಂಬಿಕೊಂಡಿದ್ದು, ಅನೇಕ ರಸ್ತೆಗಳಲ್ಲಿ ಪೈಪ್‌ಲೈನ್‌ಗಾಗಿ ತೆಗೆದಿರುವ ಗುಂಡಿಗಳನ್ನು ಕಾಟಾಚಾರಕ್ಕೆ ಮುಚ್ಚಲಾಗಿದೆ. ರಸ್ತೆಗಳ ಬದಿಯಲ್ಲಿರುವ ಸಂಪರ್ಕ ರಸ್ತೆಯ ಚರಂಡಿ ಮೇಲಿರುವ ಸಿಡಿಗಳು ಅಲ್ಲಲ್ಲಿ ಕುಸಿತ ಕಂಡಿವೆ. ಅನೇಕ ರಸ್ತೆಗಳು ಮಧ್ಯದಲ್ಲಿ ಕುಸಿದಿದ್ದು, ಕೆಲವು ರಸ್ತೆಗಳು ಸುಧಾರಣೆಗೊಳ್ಳುತ್ತಿದ್ದರೂ ಸಹ ಗುಣಮಟ್ಟದ ಕಾಮಗಾರಿಯಾಗುತ್ತಿಲ್ಲ ಎನ್ನುವ ಸಾರ್ವಜನಿಕರ ದೂರುಗಳು ಸಾಮಾನ್ಯ ಎನ್ನುವಂತಾಗಿದೆ.

ಈಗ 6-7 ವರ್ಷಗಳ ಹಿಂದೆ ಒಳಚರಂಡಿ ಯೋಜನೆಗಾಗಿ ರಸ್ತೆಗಳನ್ನು



ಅಗೆದಾಗಿನಿಂದ ದುರಸ್ತಿ ಕಾಣದೆ ತಗ್ಗು ಗುಂಡಿಗಳಾಗಿ ಮಾರ್ಪಟ್ಟಿದ್ದು, ರಸ್ತೆ ನಡುವೆಯೇ ಚೇಂಬರ್ ಬಾಕ್ಸ್‌ಗಳು ಬಾಯ್ದೆರೆದು ಅಪಾಯಕ್ಕೆ ಆಹ್ವಾನ ನೀಡುತ್ತಿವೆ. ರಸ್ತೆಗಳಲ್ಲಿ ಕುಸಿದ ಸಿಡಿಗಳು, ರಸ್ತೆಗಳು ಹಾಗೂ ಪೈಪ್‌ಲೈನ್‌ಗಾಗಿ ಹಾಗೆಯೆ ಬಿಟ್ಟಿರುವ ತಗ್ಗುಗಳು ಬಹುತೇಕ ಕಡೆಗಳಲ್ಲಿ ಅಪಾಯಕ್ಕೆ ಆಹ್ವಾನ ನೀಡುವಂತಿವೆ. ಇದಕ್ಕೆ ಸಂಬಂಧಿಸಿದ ಇಲಾಖೆ ಕ್ರಮ ತೆಗೆದುಕೊಳ್ಳಬೇಕೆಂಬುದು ಸಾರ್ವಜನಿಕರ ಆಗ್ರಹವಾಗಿದೆ.

ಈ ಕುರಿತಂತೆ ಪುರಸಭೆ ಅಧಿಕಾರಿಗಳನ್ನು ಸಂಪರ್ಕಿಸಲಾಗಿ, ಅನುದಾನ ಬಂದ ತಕ್ಷಣ ರಸ್ತೆ ಸುಧಾರಣೆ ಕೈಗೆತ್ತಿಕೊಳ್ಳಲಾಗುವದು ಎನ್ನುತ್ತಾರೆ. ದಿನದಿಂದ ದಿನಕ್ಕೆ ರಸ್ತೆ ಅವಘಡಗಳು ಹೆಚ್ಚುತ್ತಿದ್ದು, ಪುರಸಭೆಯವರು ಕ್ರಮಕ್ಕೆ ಮುಂದಾಗಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka